ಸಂಪುಟ 01 | ಸಂಚಿಕೆ 194 | ಬುಧವಾರ 10 ಜೂನ್ 2026 | ಪುಟ 4 | ಬೆಲೆ–2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ
ಮಾನ್ವಿ, ಲಿಂಗಸೂರು,
ರಾಯಚೂರ,ದೇವದುರ್ಗ
ಬಳ್ಳಾರಿ, ಕೊಪ್ಪಳ
ಯಾದಗಿರಿ, ಕಲಬುರ್ಗಿ,
ಬೀದರ, ವಿಜಯಪುರ.
ಗದಗ, ವಿಜಯನಗರ.
ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

**1) ವಿಶ್ವ ನೇತ್ರದಾನ ದಿನ**

ಪ್ರತಿ ವರ್ಷ ಜೂನ್ 10 ರಂದು ವಿಶ್ವ ನೇತ್ರದಾನ ದಿನವನ್ನು ಆಚರಿಸಲಾಗುತ್ತದೆ. ಕಾರ್ನಿಯಲ್ ಕುರುಡುತನದಿಂದ ಬಳಲುತ್ತಿರುವವರಿಗೆ ದೃಷ್ಟಿ ಮರುಕಳಿಸುವಂತೆ ಮಾಡುವುದು ಮತ್ತು ಮರಣದ ನಂತರ ತಮ್ಮ ಕಣ್ಣುಗಳನ್ನು ದಾನ ಮಾಡಲು ಜನರನ್ನು ಪ್ರೋತ್ಸಾಹಿಸುವುದು ಈ ದಿನದ ಪ್ರಮುಖ ಉದ್ದೇಶವಾಗಿದೆ.

**2) ರಾಷ್ಟ್ರೀಯ ಗಿಡ ಮೂಲಿಕೆ ಮತ್ತು ಮಸಾಲೆ ದಿನ**

ಪ್ರತಿ ವರ್ಷ ಜೂನ್ 10 ರಂದು ರಾಷ್ಟ್ರೀಯ ಗಿಡಮೂಲಿಕೆ ಮತ್ತು ಮಸಾಲೆ ದಿನವನ್ನು (National Herbs and Spices Day) ಆಚರಿಸಲಾಗುತ್ತದೆ. ಅಡುಗೆಯ ರುಚಿಯನ್ನು ಹೆಚ್ಚಿಸಲು, ಪೌಷ್ಟಿಕಾಂಶವನ್ನು ವೃದ್ಧಿಸಲು ಮತ್ತು ವಿವಿಧ ಔಷಧೀಯ ಗುಣಗಳನ್ನು ಪರಿಚಯಿಸಲು ಈ ದಿನವನ್ನು ಮೀಸಲಿಡಲಾಗಿದೆ.

**3) ಅಂತರರಾಷ್ಟ್ರೀಯ ವಿದ್ಯುತ್ ತಜ್ಞರ ದಿನ**

ಪ್ರತಿ ವರ್ಷ ಜೂನ್ 10 ರಂದು ಅಂತರರಾಷ್ಟ್ರೀಯ ವಿದ್ಯುತ್ ತಜ್ಞರ ದಿನವನ್ನು (International Electrician Day) ಆಚರಿಸಲಾಗುತ್ತದೆ. ವಿದ್ಯುತ್ ಕ್ಷೇತ್ರಕ್ಕೆ ಅಪಾರ ಕೊಡುಗೆ ನೀಡಿದ ವಿಜ್ಞಾನಿ ಆಂಡ್ರೆ–ಮೇರಿ ಆಂಪಿಯರ್ (André-Marie Ampère) ಅವರ ಪುಣ್ಯತಿಥಿಯ ನೆನಪಿಗಾಗಿ 1986 ರಲ್ಲಿ ಈ ದಿನವನ್ನು ಸ್ಥಾಪಿಸಲಾಯಿತು

**4) ಬಾಲ ರಾಜ್ ಭಲ್ಲ ರವರ ಜಯಂತಿ**

ಭಾರತದ ಸ್ವಾತಂತ್ರ್ಯ ಹೋರಾಟಗಾರ, ಕ್ರಾಂತಿಕಾರಿ ಮತ್ತು ಗಾಂಧಿವಾದಿ ಬಾಲ ರಾಜ್ ಭಲ್ಲಾ ರವರ ಜನ್ಮದಿನವು ಪ್ರತಿವರ್ಷ ಜೂನ್ 10 ರಂದು ಆಚರಿಸಲ್ಪಡುತ್ತದೆ. ಅವರು 1888ರ ಜೂನ್ 10 ರಂದು ಈಗಿನ ಪಾಕಿಸ್ತಾನದ ಪಂಜಾಬ್ ಪ್ರಾಂತ್ಯದ ಗುಜ್ರಾನ್‌ವಾಲಾದಲ್ಲಿ ಜನಿಸಿದರು.

## ಸುಭಾಷಿತ

ಅದೃಷ್ಟವೆನ್ನುವುದು ಪ್ರಯತ್ನವೆಂಬ ತಾಯಿ ಹಾಗೂ ಅವಕಾಶ ಎಂಬ ತಂದೆಗೆ ಜನಿಸುವ ಮಗು.

–ಗುರುನಾನಕ್

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ನೆಹರೂ ಹಿಂದಿಕ್ಕಿ ಭಾರತದ ದೀರ್ಘಾವಧಿಯ ಪ್ರಧಾನಿಯಾಗಿ ಮೋದಿ ದಾಖಲೆ

❏ ನೈಜ್ಯ ದೆಸೆ ನ್ಯೂಸ್

**ನವದೆಹಲಿ: ಭಾರತದ ರಾಜಕೀಯ ಇತಿಹಾಸದಲ್ಲಿ ಪ್ರಧಾನಿ ನರೇಂದ್ರಮೋದಿ ಅವರು ಮತ್ತೊಂದು ಐತಿಹಾಸಿಕ ಮೈಲಿಗಲ್ಲು ತಲುಪುತ್ತಿದ್ದಾರೆ. ನಾಳೆ ಭಾರತದ ರಾಜಕೀಯದಲ್ಲಿ ಅತಿ ಹೆಚ್ಚು ದಿನಗಳ ಕಾಲ ಸತತವಾಗಿ ಅಧಿಕಾರ ನಡೆಸಿದ ಚುನಾಯಿತ ಪ್ರಧಾನಿ ಎಂಬ ಹೆಗ್ಗಳಿಕೆಗೆ ಪಾತ್ರರಾಗಲಿದ್ದಾರೆ.**

ಪ್ರಧಾನಿ ನರೇಂದ್ರಮೋದಿ ಅವರು 2026ರ ಜೂನ್ 10ರಂದು 4,399 ದಿನಗಳನ್ನು ಪೂರೈಸುವ ಮೂಲಕ, ಭಾರತದ ಮೊದಲ ಪ್ರಧಾನಿ ಜವಾಹರಲಾಲ್ ನೆಹರೂ ಅವರು 1952ರ ಸಾರ್ವತ್ರಿಕ ಚುನಾವಣೆ ನಂತರ ಗಳಿಸಿದ್ದ 4,398 ದಿನಗಳ ದಾಖಲೆಯನ್ನು ಹಿಂದಿಕ್ಕಲಿದ್ದಾರೆ. ನೆಹರೂ ದಾಖಲೆಯನ್ನು ಮುರಿಯುವುದು ಕೇವಲ ಅಂಕಿಅಂಶಗಳ ಆಟವಲ್ಲ. ಇದು ಭಾರತದ ಮತದಾರರ ಮನಸ್ಥಿತಿಯಲ್ಲಿ ಆಗಿರುವ ಬದಲಾವಣೆ ಮತ್ತು ಕಳೆದ ಒಂದು ದಶಕದಲ್ಲಿ ದೇಶದ ರಾಜಕೀಯದಲ್ಲಿ ಬಿಜೆಪಿ ಮತ್ತು ನರೇಂದ್ರಮೋದಿಯವರ ಅಪ್ರತಿಮ ಪ್ರಾಬಲ್ಯವನ್ನು ದೃಢಪಡಿಸುತ್ತದೆ.

ಇದು ಭಾರತೀಯ ಪ್ರಜಾಪ್ರಭುತ್ವದ ವಿಕಸನದಲ್ಲಿ ಒಂದು ಹೊಸ ಅಧ್ಯಾಯವಾಗಿ ಉಳಿಯಲಿದೆ. ಇಲ್ಲಿನ ಮುಖ್ಯ ಅಂಶವೆಂದರೆ



ಚುನಾಯಿತ ಪ್ರಧಾನಿಯಾಗಿ ಕಳೆದ ಅವಧಿ. ನೆಹರೂ ಅವರು ಸ್ವಾತಂತ್ರ್ಯ ನಂತರ 1947 ರಿಂದಲೇ ಅಧಿಕಾರದಲ್ಲಿದ್ದರೂ, ಭಾರತದ ಮೊದಲ ಸಾರ್ವತ್ರಿಕ ಚುನಾವಣೆ (1951–52) ನಡೆದ ನಂತರ ಪ್ರಧಾನಿಯಾಗಿ ಕಳೆದ ದಿನಗಳನ್ನು ಮಾತ್ರವೇ ಈ ಹೋಲಿಕೆಗೆ ಮಾನದಂಡವಾಗಿ ತೆಗೆದುಕೊಳ್ಳಲಾಗಿದೆ. ಮೋದಿ ಅವರು ಮೇ 26, 2014ರಂದು ಅಧಿಕಾರ ಸ್ವೀಕರಿಸಿದ ನಂತರ, ಸತತ ಮೂರು ಬಾರಿ ಲೋಕಸಭಾ ಚುನಾವಣೆಯಲ್ಲಿ ಗೆದ್ದು ಅಧಿಕಾರದಲ್ಲಿ ಮುಂದುವರಿಯುತ್ತಿರುವುದು ಈ ದಾಖಲೆಗೆ ಕಾರಣವಾಗಿದೆ.

ನೆಹರೂ ಅವರ ನಂತರದ ಅವಧಿಯಲ್ಲಿ ಭಾರತದ ರಾಜಕೀಯವು ಕಾಂಗ್ರೆಸ್ ಪಕ್ಷದ ಪ್ರಾಬಲ್ಯದ ಸುತ್ತ ಸುತ್ತುತ್ತಿತ್ತು. ಆದರೆ, ಮೋದಿ ಅವರು ಬಿಜೆಪಿ ನೇತೃತ್ವದ ಮೈತ್ರಿಕೂಟವನ್ನು ಸತತ ಮೂರನೇ ಬಾರಿಗೆ ಅಧಿಕಾರಕ್ಕೆ ತರುವ ಮೂಲಕ, ಪಕ್ಷರಹಿತ ಮತ್ತು ಪರ್ಯಾಯ ರಾಜಕೀಯದ ಶಕ್ತಿಯನ್ನು ಸಾಬೀತುಪಡಿಸಿದ್ದಾರೆ.

ಮೋದಿ ಅವರ ರಾಜಕೀಯ ಯಶಸ್ಸಿಗೆ ಅಭಿವೃದ್ಧಿಯೊಂದಿಗೆ ಸಾಂಸ್ಕೃತಿಕ ರಾಷ್ಟ್ರೀಯತೆ ಮತ್ತು ಹಿಂದುತ್ವದ ಅಜೆಂಡಾಗಳನ್ನು ಬೆಸೆದಿರುವುದು ಪ್ರಮುಖ ಕಾರಣ. ಇದು ಗ್ರಾಮೀಣ ಮತ್ತು ನಗರ ಪ್ರದೇಶಗಳೆರಡರಲ್ಲೂ ಅವರಿಗೆ ಭದ್ರ ನೆಲೆಯನ್ನು ನೀಡಿದೆ. ನೆಹರೂ ಅವರು ಪ್ರಧಾನಿಯಾಗಿದ್ದ ಕಾಲಘಟ್ಟಕ್ಕೆ ಹೋಲಿಸಿದರೆ, ಇಂದಿನ ರಾಜಕೀಯ ವ್ಯವಸ್ಥೆಯು ಹೆಚ್ಚು ಸ್ಪರ್ಧಾತ್ಮಕವಾಗಿದೆ. 1951–52ರಲ್ಲಿ ಕೆಲವೇ ಪಕ್ಷಗಳು ಸ್ಪರ್ಧಿಸುತ್ತಿದ್ದವು, ಆದರೆ ಇಂದು ನೂರಾರು ಪಕ್ಷಗಳು ಮತ್ತು ಪ್ರಾದೇಶಿಕ ಶಕ್ತಿಗಳ ನಡುವೆ ತನ್ನ ಪಕ್ಷವನ್ನು ಮುನ್ನಡೆಸುತ್ತಿರುವುದು ಮೋದಿ ಅವರ ಆಡಳಿತಾತ್ಮಕ ಮತ್ತು ರಾಜಕೀಯ ತಂತ್ರಗಾರಿಕೆಯನ್ನು ಎತ್ತಿ ತೋರಿಸುತ್ತದೆ.

ಇಂದಿರಾ ಗಾಂಧಿಯ ದಾಖಲೆ ಮುರಿದ ಮೋದಿ : 2025 ಜುಲೈ 25ರಂದೇ ಮೋದಿ ಅವರು ಇಂದಿರಾ ಗಾಂಧಿಯವರ ಸುದೀರ್ಘ ಅವಧಿಯ (4,077 ದಿನಗಳು) ದಾಖಲೆಯನ್ನು ಹಿಂದಿಕ್ಕಿ, ದೇಶದ ಎರಡನೇ ಅತಿ ಹೆಚ್ಚು ಕಾಲ ಸೇವೆ ಸಲ್ಲಿಸಿದ ಪ್ರಧಾನಿ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದರು. ಜವಾಹರಲಾಲ್ ನೆಹರು ಅವರು ಸತತವಾಗಿ ಸುಮಾರು 17 ವರ್ಷಗಳ ಕಾಲ (1947 ರಿಂದ 1964) ಭಾರತದ ಪ್ರಧಾನಿಯಾಗಿ ಕಾರ್ಯನಿರ್ವಹಿಸಿದ್ದರು. ನರೇಂದ್ರ ಮೋದಿ ಅವರು 2014ರಲ್ಲಿ ಪ್ರಧಾನಿಯಾಗಿ ಅಧಿಕಾರ ಸ್ವೀಕರಿಸಿದ ನಂತರ, ಸತತವಾಗಿ ಮೂರನೇ ಬಾರಿಗೆ ಅಧಿಕಾರವನ್ನು ಮುಂದುವರಿಸುವ ಮೂಲಕ ಈ ಸಾಧನೆ ಮಾಡಿದ್ದಾರೆ.

# ಸರ್ಕಾರಿ ಪೂರ್ವ ಪ್ರಾಥಮಿಕ ಶಾಲೆಯ ಸದುಪಯೋಗ ಮಾಡಿಕೊಳ್ಳಿ

❏ ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: 2026–27 ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ಈ ಶಾಲೆಯು ಕರ್ನಾಟಕ ಪಬ್ಲಿಕ್ ಶಾಲೆ (ಕೆಪಿಎಸ್) ಆಗಿದ್ದು ಇದರ ಅಡಿಯಲ್ಲಿ ಪೂರ್ವ ಪ್ರಾಥಮಿಕ (ಎಲ್ಕೆಜಿ ಯುಕೆಜಿ) ಆಂಗ್ಲ ಮಾಧ್ಯಮದಲ್ಲಿ ಆರಂಭಿಸಲಾಗಿದೆ ಇದರ ಸದುಪಯೋಗವನ್ನು ಮಾಡಿಕೊಳ್ಳಿ ಎಂದು ಕ್ಷೇತ್ರ ಸಮನ್ವಯಾಧಿಕಾರಿ ಆರ್ ಬಿ ದಮ್ಮೂರಮಠ ಹೇಳಿದರು.**

ಸೋಮವಾರ ಪಟ್ಟಣದ ಸರ್ಕಾರಿ ಶಾಲೆಯಲ್ಲಿ ಪಬ್ಲಿಕ್ ಶಾಲೆಯ ನೂತನ ವಿಭಾಗದ ಪರಿಚಯ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಖಾಸಗಿ ಶಾಲೆಯಲ್ಲಿ




ಹೆಚ್ಚಿನ ದುಡ್ಡು ಕೊಟ್ಟು ಮಕ್ಕಳಿಗೆ ಶಿಕ್ಷಣ ಕೊಡಿಸಲು ಎಲ್ಲರಿಗೂ ಸಾಧ್ಯವಾಗುವುದಿಲ್ಲ ಅಂತವರಿಗೆ ಒಳ್ಳೆಯ ಗುಣಮಟ್ಟದ ಶಿಕ್ಷಣ ನೀಡುವ ಈ ಸರ್ಕಾರಿ ಶಾಲೆಗಳು ಹೆಚ್ಚು ಅನುಕೂಲವಾಗುತ್ತವೆ ಎಂದರು.ಮುಖ್ಯ ಶಿಕ್ಷಕಿ ಡಾ.ಅನೀತಾ ಸಜ್ಜನ ಮಾತನಾಡಿ ನೂತನವಾಗಿ ಆರಂಭಿಸಲಾಗಿರುವ ಆಂಗ್ಲ ಮಾಧ್ಯಮದ ಈ ಪೂರ್ವ ಪ್ರಾಥಮಿಕ ಶಾಲೆಯಲ್ಲಿ ಉತ್ತಮ ಭೋದಕರು, ಗುಣಮಟ್ಟದ ಶಿಕ್ಷಣದ ಜೊತೆಗೆ ಲ್ಯಾಬಿನ ಸವಲತ್ತೂ ಇರುವುದು ಪಾಲಕರು ಇದರ ಸದುಪಯೋಗವನ್ನು ಮಾಡಿಕೊಳ್ಳಬೇಕೆಂದರು.

ಇದೇ ಸಂದರ್ಭದಲ್ಲಿ ನೂತನವಾಗಿ ಎಲ್ಕೆಜಿ ವರ್ಗಕ್ಕೆ ದಾಖಲಾದ ಮಕ್ಕಳನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಕೆಪಿಎಸ್ ಪ್ರಾಥಮಿಕ ವಿಭಾಗದ ಮುಖ್ಯ ಗುರುಗಳಾದ ಬಿ.ಸಿ.ಮಸರಕಲ್ಲ,ಬಿಆರ್‌ಪಿ ಕಾಶಿನಾಥ ಸಜ್ಜನ, ಸಿ ಆರ್‌ಪಿ ರಾಜು ವಿಜಯಪುರ, ಪಾಲಕರು ಹಾಗೂ ವಿದ್ಯಾರ್ಥಿಗಳು ಇದ್ದರು.

# ಕುಂಕುಮ ಹಚ್ಚಿ ಲಕ್ಷ ರೂಪಾಯಿ ದೋಚಿದ ಕಳ್ಳರು"

❏ ನೈಜ್ಯ ದೆಸೆ ನ್ಯೂಸ್

**ಮಸ್ಕಿ: ಪಟ್ಟಣದ ಪುರಸಭೆ ಕಾರ್ಯಾಲಯದ ಪಕ್ಕದಲ್ಲಿರುವ ಲಕ್ಷ್ಮೀ ವೆಂಕಟೇಶ್ವರ ತರಕಾರಿ ಅಂಗಡಿಯ ಮಾಲೀಕನಿಗೆ ಯಾಮಾರಿಸಿ ಹಣೆಗೆ ಕುಂಕುಮ ಹಚ್ಚಿ ಪ್ರಜ್ಞೆ ಇಲ್ಲದಂತೆ ಮಾಡಿ 1 ಲಕ್ಷ ರೂ. ತೆಗೆದುಕೊಂಡು ಹೋದ ಘಟನೆ ಭಾನುವಾರ ಬೆಳಿಗ್ಗೆ ನಡೆದಿದೆ.**

ಮಾಲೀಕ ಮೌನೇಶ ತನ್ನ ತರಕಾರಿ ಅಂಗಡಿಗೆ ಪ್ರತಿದಿನದಂತೆ ಬೆಳಿಗ್ಗೆ ಬಂದಿದ್ದಾನೆ. ಭಾನುವಾರ ಸಂತೆ ನಡೆಯುತ್ತಿರುವ ಕಾರಣ ಮಾರುಕಟ್ಟೆಯಲ್ಲಿ ತರಕಾರಿ ಹರಾಜು ಮತ್ತು ಖರೀದಿಗಾಗಿ ಒಂದು ಲಕ್ಷ ರೂಪಾಯಿಗಳನ್ನು ಜೇಬಿನಲ್ಲಿ ಇಟ್ಟುಕೊಂಡು ಅಂಗಡಿಯ ಒಂದು ಬಾಗಿಲು ತೆಗೆದು ತರಕಾರಿ ಸರಿಪಡಿಸುತ್ತಿದ್ದಾಗ, ಅಂಗಡಿಗೆ ಆಗಮಿಸಿದ ಐವರು ನೇಪ ಮಾತ್ರಕ್ಕೆ ತರಕಾರಿ ಖರೀದಿಸಿದ್ದಾರೆ. ಅಂಗಡಿ ಮಾಲೀಕ ಮೌನೇಶ ಎಲ್ಲ ತರಕಾರಿಯನ್ನು ತೂಗಿ ಬೆಲೆ ಹೇಳಿ ಚೀಲದಲ್ಲಿ



ಹಾಕುವಷ್ಟರಲ್ಲಿ ಅದರಲ್ಲಿದ್ದ ಓರ್ವ ವ್ಯಕ್ತಿ ತರಕಾರಿ ಅಂಗಡಿ ಮಾಲೀಕ ಮೌನೇಶನಿಗೆ ಕುಂಕುಮ ಹಚ್ಚಿದ್ದಾನೆ.

ಮೌನೇಶನು ಪ್ರಜ್ಞೆ ಕಳೆದುಕೊಂಡು ಅಂಗಡಿಯಲ್ಲಿ ಬಿದ್ದಿದ್ದಾನೆ. ಆತನ ಜೇಬಿನಲ್ಲಿದ್ದ 1 ಲಕ್ಷ ಹಣವನ್ನು ದೋಚಿ ಖದೀಮರು ಪರಾರಿಯಾಗಿದ್ದಾರೆ. ಭಾನುವಾರ ಬೆಳಿಗ್ಗೆ ಸುಮಾರು 6 ಗಂಟೆಗೆ ತರಕಾರಿ ತೆಗೆದುಕೊಳ್ಳುವ ನೆಪದಲ್ಲಿ ತರಕಾರಿ ಮಾಲೀಕ ಮೌನೇಶನಿಂದ 1 ಲಕ್ಷ ಸುಲಿಗೆಯಾಗಿದೆ. ಕುಂಕುಮ ಹಚ್ಚಿ ಪ್ರಜ್ಞಾಹೀನಗೊಳಿಸಿ ಮಾತನಾಡದಂತೆ ಮಾಡಿ ಈ ಕೃತ್ಯ ಎಸಗಿದ್ದಾರೆ. ತರಕಾರಿ ವ್ಯಾಪಾರಿ ಪಟ್ಟಣದ ಪೊಲೀಸ್ ಠಾಣೆಯಲ್ಲಿ ಈ ಕುರಿತು ದೂರು ನೀಡಿದ್ದು ಪಿಎಸ್‌ಐ ಕೆ. ರಂಗಯ್ಯ ಹಾಗೂ ಪೊಲೀಸ್ ಸಿಬ್ಬಂದಿ ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

# ಅಗ್ನಿಶಾಮಕ ಠಾಣೆ ನೂತನ ಕಟ್ಟಡ ಉದ್ಘಾಟನಾ ಸಮಾರಂಭ ನಾಳೆ( ಜೂ.11)

❏ ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಪಟ್ಟಣದಲ್ಲಿ ನೂತನವಾಗಿ ನಿರ್ಮಾಣಗೊಂಡಿರುವ ಅಗ್ನಿಶಾಮಕ ಠಾಣೆಯ ಕಟ್ಟಡ ಉದ್ಘಾಟನಾ ಸಮಾರಂಭ ನಾಳೆ (ಜೂನ್ 11) ರಂದು ಜರುಗಲಿದೆ. ಅಂದು ಮಧ್ಯಾಹ್ನ 12–00 ಘಂಟೆಗೆ ಪಟ್ಟಣದ ಗಡಿ ಸೋಮನಾಳ ರಸ್ತೆಯಲ್ಲಿರುವ ಈ ನೂತನ ಕಟ್ಟಡವನ್ನು ಕರ್ನಾಟಕ ಸರ್ಕಾರದ ಗೃಹ ಸಚಿವರಾದ ಪ್ರಿಯಾಂಕ ಖರ್ಗೆ ಅವರು ಉದ್ಘಾಟಿಸಲಿದ್ದಾರೆ.**




ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲ ಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಬಿ.ಪಾಟೀಲ ಅವರ ಘನ ಉಪಸ್ಥಿತಿ ಇರುವುದು. ಮುದ್ದೇಬಿಹಾಳ ಶಾಸಕ, ಕೆ ಎಸ್ ಡಿ ಎಲ್ ಅಧ್ಯಕ್ಷರಾದ ಸಿ.ಎಸ್.ನಾಡಗೌಡ(ಅಪ್ಪಾಜಿ) ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ವಿರೋಧ ಪಕ್ಷದ ಮುಖ್ಯ ಸಚೇತಕ ರವಿಕುಮಾರ ಎನ್, ಕರ್ನಾಟಕ ಸರ್ಕಾರದ ನವದೆಹಲಿ ವಿಶೇಷ ಪ್ರತಿನಿಧಿ–2 ಪ್ರಕಾಶ ಬಿ.ಹುಕ್ಕೇರಿ, ವಿಜಯಪುರ ಸಂಸದ ರಮೇಶ ಚಂ. ಜಿಗಜಿಣಗಿ, ರಾಜ್ಯಸಭೆ ಸಂಸದೆ ಡಾ.ಸುಧಾ ಮೂರ್ತಿ,ಕ.ಕೌ.ಅ.ನಿ. ಅಧ್ಯಕ್ಷೆ ಕಾಂತಾ ನಾಯ್ಕ,ಕ.ರಾ.ಲಿಂ.ಅ.ಮಂ. ಅಧ್ಯಕ್ಷ ಬಿಎಸ್ ಕವಲಗಿ,ದೇ.ಹಿ.ಶಾಸಕ ರಾಜುಗೌಡ ಪಾಟೀಲ, ವಿಧಾನ ಪರಿಷತ್ ಸದಸ್ಯರಾದ ಹಣಮಂತ ಆರ್.ನಿರಾಣಿ,ಸುನೀಲಗೌಡ ಬಿ.ಪಾಟೀಲ,ಪಿ.ಎಚ್.ಪೂಜಾರ, ಕೇಶವ ಪ್ರಸಾದ್ ಎಸ್ ಆಗಮಿಸುವರು. ಸ.ಅ.ಮು. ಕಾರ್ಯದರ್ಶಿ ತುಷಾರ ಗಿರಿನಾಥ–,ಪೋ.ಮ.ನಿ ಹಾಗೂ ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಮಹಾ ನಿರ್ದೇಶಕ ಪ್ರಶಾಂತ ಕುಮಾರ ಠಾಕೂರ,

ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕ ಹಾಗೂ ಕಾರ್ಯದರ್ಶಿ ವಿ.ಶರತ್ ಚಂದ್ರ,ಕ.ರಾ.ಅ.ಶಾ.ಮತ್ತು ತುರ್ತು ಸೇವೆಗಳ ಮಹಾ ನಿರ್ದೇಶಕ ಎಂ.ನಂಜುಂಡಸ್ವಾಮಿ,ಕ.ರಾ.ಅ.ಶಾ. ತುರ್ತುಸೇವೆಗಳ ಪೊಲೀಸ್ ಉಪ ಮಹಾ ನಿರೀಕ್ಷಕರಾದ ರೇಣುಕಾ ಕೆ. ಸುಕುಮಾರ, ವಿಜಯಪುರ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಖುಷಬೂ ಚೌಧರಿ,ಕ.ರಾ.ಅ.ಶಾ.ತುರ್ತು ಸೇವೆಗಳ ನಿರ್ದೇಶಕ ಟಿಎನ್ ಶಿವಶಂಕರ, ವಿಜಯಪುರ ಜಿಲ್ಲಾಧಿಕಾರಿ ಡಾ. ಆನಂದ್ ಕೆ. ಜಿಪಂ ಸಿಇಒ ರಿಷಿ ಆನಂದ, ಜಿಲ್ಲಾ ಪೊಲೀಸ್ ಪರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ಉಪಸ್ಥಿತರಿರುವರು ಎಂದು ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಹುಬ್ಬಳ್ಳಿ ವಲಯ ಪ್ರಾದೇಶಿಕ ಅಗ್ನಿಶಾಮಕ ಅಧಿಕಾರಿ ಮಂಜುನಾಥ್ ಸಾಲಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


# ದೇವದುರ್ಗ ಯುವ ಕಾಂಗ್ರೆಸ್ ಉಪಾಧ್ಯಕ್ಷರಾಗಿ ಜಾಲಹಳ್ಳಿಯ ರಮೇಶ್ ಬಾಗೂರು ನೇಮಕ

❏ ನೈಜ್ಯ ದೆಸೆ ನ್ಯೂಸ್

**ಅರಕೇರ : ದೇವದುರ್ಗ ವಿಧಾನಸಭಾ ಕ್ಷೇತ್ರದ ಯುವ ಕಾಂಗ್ರೆಸ್ ಸಮಿತಿಗೆ ನೂತನ ಪದಾಧಿಕಾರಿಗಳ ನೇಮಕಾತಿ ಮಾಡಲಾಗಿದ್ದು, ಜಾಲಹಳ್ಳಿ ನಿವಾಸಿ ರಮೇಶ್ ಬಾಗೂರು ಅವರನ್ನು ದೇವದುರ್ಗ ಯುವ ಕಾಂಗ್ರೆಸ್ ಸಮಿತಿಯ ಉಪಾಧ್ಯಕ್ಷರಾಗಿ ನೇಮಕಗೊಳಿಸಲಾಗಿದೆ.**

ಅರಕೇರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಕೆಪಿಸಿಸಿ ಮಹಿಳಾ ಘಟಕದ ರಾಜ್ಯ ಉಪಾಧ್ಯಕ್ಷೆ ಶ್ರೀದೇವಿ ಆರ್ ನಾಯಕ್ ಅವರು ರಮೇಶ್ ಬಾಗೂರು ಅವರಿಗೆ ನೇಮಕಾತಿ ಪತ್ರ ವಿತರಿಸಿದರು. ಕರ್ನಾಟಕ ಪ್ರದೇಶ ಯುವ ಕಾಂಗ್ರೆಸ್ ಸಮಿತಿಯ ರಾಜ್ಯಾಧ್ಯಕ್ಷ ಹೆಚ್.ಎಸ್. ಮಂಜುನಾಥಗೌಡ ಅವರ ಸೂಚನೆ, ಜಿಲ್ಲಾ ಯುವ ಕಾಂಗ್ರೆಸ್ ಸಮಿತಿಯ ಜಿಲ್ಲಾಧ್ಯಕ್ಷ ಮರಿಸ್ವಾಮಿ ಗಟ್ಟಿಬೆಂಚಲಿ ಅವರ ಆದೇಶ ಹಾಗೂ ದೇವದುರ್ಗ ತಾಲೂಕು ಯುವ ಕಾಂಗ್ರೆಸ್






ಅಧ್ಯಕ್ಷ ಲಿಂಗಣ್ಣ ನಾಯಕ ಅವರ ಶಿಫಾರಸಿನ ಮೇರೆಗೆ ಈ ನೇಮಕಾತಿ ಮಾಡಲಾಗಿದೆ.

ಜಾಲಹಳ್ಳಿ ನಿವಾಸಿಯಾದ ರಮೇಶ್ ಬಾಗೂರು (ತಂದೆ: ಹುಸೇನಪ್ಪ ಬಾಗೂರು) ಅವರನ್ನು ಪಕ್ಷದ ಸಂಘಟನೆಯ ಹಿತದೃಷ್ಟಿಯಿಂದ ತಕ್ಷಣದಿಂದ ಜಾರಿಗೆ ಬರುವಂತೆ ಉಪಾಧ್ಯಕ್ಷರನ್ನಾಗಿ ನೇಮಕ ಮಾಡಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ. ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶರಣಗೌಡ ಗೌರಂಪೇಟೆ, ಅಲ್ಪಸಂಖ್ಯಾತರ ಘಟಕದ ಅಧ್ಯಕ್ಷರು ಹಾಗೂ ವಿವಿಧ ವಿಭಾಗಗಳ ಪದಾಧಿಕಾರಿಗಳು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು. ನೂತನ ಜವಾಬ್ದಾರಿ ವಹಿಸಿಕೊಂಡಿರುವ ರಮೇಶ್ ಬಾಗೂರು ಅವರು ಪಕ್ಷ ಸಂಘಟನೆ ಬಲಪಡಿಸುವ ಜೊತೆಗೆ ಯುವಕರನ್ನು ಕಾಂಗ್ರೆಸ್ ಪಕ್ಷದತ್ತ ಸೆಳೆಯುವ ಕಾರ್ಯದಲ್ಲಿ ತೊಡಗಿಕೊಳ್ಳಬೇಕು ಎಂದು ಮುಖಂಡರು ಕರೆ ನೀಡಿದರು. ನೇಮಕಾತಿಗೆ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಹರ್ಷ ವ್ಯಕ್ತಪಡಿಸಿ ಅಭಿನಂದನೆ ಸಲ್ಲಿಸಿದ್ದಾರೆ. ವರದಿ: ಖಾಜಾ ಹುಸೇನ್ ಬಾಬಾ, ಜಾಲಹಳ್ಳಿ

## ಸಾಹಿತ್ಯ ಸಿಂಚನ

### ಬಸವ ಬಸವ ಎನ್ನಿರೋ

ಬಸವ ಬಸವ ಎನ್ನಿರೋ ಜಗದ ಜನರೆಲ್ಲರು.!
ಬಸವ ಬಸವ ಎನ್ನಿ ಭವಸಾಗರ ದಾಂಟಲು.!
ಶಿವನೇ ಬಸವನಾಗಿ ಶಿವ ಶರಣನಾಗಿ ಬಂದ !!ಪ!!

ಧರೆಯ ಇತಿಹಾಸದೊಳು ಮನೆ ಮಾತಾದ.!
ಕನ್ನಡ ಭಾಷೆಗೆ ಸಿರಿ ಹಿರಿಮೆ ಗರಿಮೆಯ ಕಟ್ಟಿದ.!
ವಚನವ ರಚಿಸಿ ಕನ್ನಡ ಶ್ರೀಮಂತಗೊಳಿಸಿದ.!
ಕರ್ನಾಟಕದ ಕೀರ್ತಿ ಪತಾಕೆ ಎತ್ತರಕ್ಕೇರಿಸಿದ.!!1!!

ಮಡಿಹುಡಿ ಎನ್ನುವುದು ಸರಳತೆಗೊಳಿಸಿದ.!
ಕಾಯಕದಲ್ಲಿ ನಿರತನಾಗಿ ಕೈಲಾಸ ತೋರಿಸಿದ.!
ದಾಸೋಹದಲಿ ದೇವರನು ಕಂಡುಕೊಂಡ.!
ಅನುಭವದಲ್ಲಿ ಅಮೃತವನ್ನೇ ಉಣಿಸಿದ.!!2

ಮೌಢ್ಯತೆ ಎನ್ನುವ ಭಾರಬಹುದೂರ ತಳ್ಳಿದ.!
ಸರಳತೆಯ ಸಂಸ್ಕಾರವನು ಸರ್ವರಿಗೂ ಕಲಿಸಿದ.!
ಅವರಿವರೆನ್ನದೇ ಎಲ್ಲರನು ನಮ್ಮವರೆಂದ.!
ಕೆಳಬಿದ್ದ ದುರ್ಬಲರನ್ನು ಹಿಡಿದೆತ್ತಿ ನಿಲ್ಲಿಸಿದ.!!3!!

ಮನುಜರನು ಕರುಣೆಯಿಂದ ನೋಡಿದ.!
ಮನುಜ ಮತದ ಮಮಕಾರ ತುಂಬಿದ.!
ಹೆಣ್ಣಿಗೆ ತಾ ಪ್ರಥಮ ಆದ್ಯತೆಯನು ನೀಡಿದ.!
ದಯೆವೇ ಧರ್ಮವೆಂದು ಜಗದೊಳು ಸಾರಿದ.!!4!!

ಹಿರಿಯ ಅನುಭಾವಿಗಳನ್ನು ಗೌರವದಿ ಕಂಡ.!
ಕಲ್ಯಾಣದ ಇತಿಹಾಸ ಜಗದೊಳಗೆ ಸಾರಿದ.!
ಸಾಂಸ್ಕೃತಿಕ ನಾಯಕನಾಗಿ ಉಸಿರಲ್ಲಿ ಹೆಸರಾದ.!
ಕಂದಪಂಪಯ್ಯನ ಹೃದಯದಿ ಬಸವ ಉಳಿದ.!!5!!

–ಪಂಪಯ್ಯಸ್ವಾಮಿ ಸಾಲಿಮಠ
ಅಂತರಗಂಗಿ–ಸಿಂಧನೂರು.

# ಮಾನವೀಯತೆ ಮೆರೆದ ಸಮಾಜ ಸೇವಕ ಅಸ್ಕಿ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಪಟ್ಟಣದ ಭೂಮಿಕಾ ಹೋಟೆಲದಲ್ಲಿ ಇತ್ತೀಚಿಗೆ ಸಿಲೆಂಡರ್ ಗ್ಯಾಸ್ ಸೋರಿಕೆಯಿಂದಾಗಿ ತೀವ್ರವಾಗಿ ಗಾಯಗೊಂಡ ಕಟ್ಟಡ ಕಾರ್ಮಿಕರಾದ ಶಕೀಲ್ ಕುಂಬಾರವಾಡಿ ಹಾಗೂ ಬಶೀರ ಕಡದರಾಳ ಇವರು ಆಸ್ಪತ್ರೆಗೆ ಸೇರಿ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟ ಹಿನ್ನೆಲೆಯಲ್ಲಿ ಅವರ ಕುಟುಂಬಕ್ಕೆ ಅಸ್ಕಿ ಫೌಂಡೇಶನ್ ಕೊಣ್ಣೂರ ಅಧ್ಯಕ್ಷ ಸಿ.ಬಿ.ಅಸ್ಕಿ ಅವರು ಸಾಂತ್ವನ ತಿಳಿಸಿ ಎರಡೂ ಕುಟುಂಬಗಳಿಗೆ ತಲಾ ರೂ.50,000 ಸಾವಿರ ಆರ್ಥಿಕ ಸಹಾಯ ನೀಡಿ ಮಾನವೀಯತೆಯನ್ನು ಮೆರೆದಿದ್ದಾರೆ.**

ಸೋಮವಾರ ಪಟ್ಟಣದ ಬಿಸ್ತಿ ಓಣಿಯಲ್ಲಿರುವ ಸಮುದಾಯ ಭವನದಲ್ಲಿ ಸಮಾಜದ ಗಣ್ಯರ ಸಮ್ಮುಖದಲ್ಲಿ ಅವರು ಅಗ್ನಿ ಅವಘಡದಲ್ಲಿ ಮೃತಪಟ್ಟ ಶಕೀಲ ಕುಂಬಾರವಾಡಿ ಹಾಗೂ ಬಸೀರ ಖಡದರಾಳ ಇವರ ಕುಟುಂಬದ ಸದಸ್ಯರಿಗೆ ತಲಾ ರೂ.50,000 ಸಾವಿರ ಆರ್ಥಿಕ ಸಹಾಯವನ್ನು ನೀಡಿದರು. ಈ



ಸಂದರ್ಭದಲ್ಲಿ ಅವರು ಮಾತನಾಡಿ ಮೃತಪಟ್ಟ ಕಟ್ಟಡ ಕಾರ್ಮಿಕರ ಎರಡೂ ಕುಟುಂಬಗಳು ಕಡು ಬಡತನದ ಸ್ಥಿತಿಯಲ್ಲಿವೆ. ಅವರಿಗೆ ಸಣ್ಣ ಸಣ್ಣ ಮಕ್ಕಳಿದ್ದಾರೆ ಅವರ ಸ್ಥಿತಿ ನೋಡಿದರೆ ಕರುಳು ಕಿತ್ತಿ ಬಾಯಿಗೆ ಬರುತ್ತದೆ ಇದು ವಿಧಿ ಲಿಖಿತ ಆದರೆ ಅವರನ್ನು ಅವಲಂಬಿಸಿದ ಕುಟುಂಬದ ಸದಸ್ಯರಿಗೆ ಎಲ್ಲ ರೀತಿಯಿಂದಲೂ ಸಹಕರಿಸುವುದು ನಮ್ಮ ಕರ್ತವ್ಯವಾಗಿದೆ ಇದನ್ನು ನಾನು ಇಲ್ಲಿ ನಿರ್ವಹಿಸುತ್ತಿದ್ದೇನೆ ಇವರು ಕಟ್ಟಡ ಕಾರ್ಮಿಕರಾಗಿರುವುದ–ರಿಂದ ಕಾರ್ಮಿಕ ಇಲಾಖೆಯಿಂದ ಇವ–ರಿಗೆ ಆರ್ಥಿಕ ನೆರವು ಸಿಗುತ್ತದೆ ಇದಕ್ಕಾಗಿ ಸಮಾಜದ ಪ್ರಮುಖರು ಪ್ರಯತ್ನಿಸಬೇಕು, ನಾನು ಸಹ ಶಾಸಕ ಅಪ್ಪಾಜಿ ನಾಡಗೌಡರಿಗೆ ಈ ನಿಟ್ಟಿನಲ್ಲಿ ಮಾತನಾಡಿ ವಿನಂತಿಸಿಕೊಳ್ಳುತ್ತೇನೆ.

ಮುಂದಿನ ದಿನಗಳಲ್ಲಿ ಈ ಮಕ್ಕಳ ವಿದ್ಯಾಭ್ಯಾಸಕ್ಕಾಗಿ ನನ್ನಿಂದ ಸಾಧ್ಯವಾದಷ್ಟು ಸಹಕಾರವನ್ನೂ ನೀಡುತ್ತೇನೆ. ಭಗವಂತ ಈ ಸಂಕಷ್ಟವನ್ನು ಸಹಿಸುವ ಶಕ್ತಿಯನ್ನು ಕುಟುಂಬದ ಸದಸ್ಯರಿಗೆ ನೀಡಲೆಂದು ಪ್ರಾರ್ಥಿಸುತ್ತೇನೆ ಎಂದರು. ಮುಸ್ಲಿಂ ಧಾರ್ಮಿಕ ಮುಖಂಡ ಸೈಯದ್ ಶಕೀಲ್ ಅಹ್ಮದ್ ಖಾಜಿ ಅವರು ಮಾತನಾಡಿ ಸಮಾಜ ಸೇವಕ ಸಿ.ಬಿ.ಅಸ್ಕಿ ಅವರು ಈಗಾಗಲೇ ತಮ್ಮ ಫೌಂಡೇಶನ್ ದಿಂದ ಸಮಾಜದಲ್ಲಿರುವ ಸಾಕಷ್ಟು ಬಡವರಿಗೆ ಜಾತಿ ಮತ ಭೇದವಿಲ್ಲದೆ ತಮ್ಮಿಂದಾದಷ್ಟು ಆರ್ಥಿಕ ಸಹಾಯವನ್ನು ನೀಡುತ್ತಿದ್ದಾರೆ ಅವರೊಬ್ಬ ಹೃದಯ ಶ್ರೀಮಂತಿಕೆ ಹೊಂದಿದ ವ್ಯಕ್ತಿಯಾಗಿದ್ದಾರೆ ಅವರ ಈ ನಿಸ್ವಾರ್ಥ ಸೇವೆ ಸಮಾಜದಲ್ಲಿರುವ ಇತರರಿಗೂ ಅನುಕರಣೀಯವಾಗಿದೆ ಎಂದರು.

ಈ ಸಮಯದಲ್ಲಿ ಪ್ರಮುಖರಾದ ಆದಮಸಾಬ ಕೊಡೆಕಲ್ಲ, ಮೋದಿನಸಾ ನಗಾರ್ಚಿ, ಮೆಹಬೂಬಶಾ ಮಕಾಂದಾರ,ಗೌಸ ನಾಸರ್, ರಾಜಅಹಮದ್ ಕಲಬುರ್ಗಿ,ಬಾಬುಸಾಬ ಮುದ್ನಾಳ,ಕಾಸೀಮ ಅಬಾಲೆ, ಮೊಹಮ್ಮದ್ ಶಫೀಕ ಇನಾಮದಾರ, ಅಬ್ದುಲ್ ರಜಾಕ ಕೊಡೆಕಲ್ಲ,ಬಸೀರ ಯಕ್ಕೇಲಿ, ಉಮರಸಿಂಗ್ ದೇವಿ,ಗೋಪಾಲ ಕಟ್ಟಿಮನಿ, ದಿಲೀಪ ಹಜೇರಿ, ದಸ್ತಗೀರ ಕಲಬುರ್ಗಿ, ಮುರ್ತುಜಾ ಕುಂಬಾರವಾಡಿ, ರಜಾಕ್ ಕುಂಬಾರವಾಡಿ ಮತ್ತಿತರರು ಇದ್ದರು.

# ಕಾರುಣ್ಯಾಶ್ರಮದಿಂದ ಜಿಲ್ಲಾ ಹಿರಿಯ ನಾಗರೀಕ ಸಬಲೀಕರಣ ಇಲಾಖೆ ಅಧಿಕಾರಿಗಳ ಭೇಟಿ



ನೈಜ್ಯ ದೆಸೆ ನ್ಯೂಸ್

ಸಿಂಧನೂರು: ರಾಯಚೂರು ಜಿಲ್ಲೆಯ ಜಿಲ್ಲಾ ಅಂಗವಿಕಲ ಮತ್ತು ವಿಕಲಚೇತನರ ಹಾಗೂ ಹಿರಿಯ ನಾಗರಿಕ ಸಬಲೀಕರಣ ಇಲಾಖೆಯ ಜಿಲ್ಲಾ ಯೋಜನಾಧಿಕಾ–ರಿಗಳಾದ ಸರಸ್ವತಿ ಅವರನ್ನು ಸಿಂಧನೂರಿನ ಕಾರುಣ್ಯ ಆಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸವ ಸ್ವಾಮಿ ಹಿರೇಮಠ ಭೇಟಿ ಮಾಡಿ ಸಂಸ್ಥೆಯ ನಿರಂತರ ಕಾರ್ಯಗಳು ಮತ್ತು ನಿರ್ವಹಣೆಯ ಸುಧೀರ್ಘವಾಗಿ ಚರ್ಚಿಸಿದರು.

ಈ ಸಮಯದಲ್ಲಿ ಆಶ್ರಮದಲ್ಲಿನ ವೃದ್ಧರಿಗೆ ಅವಶ್ಯಕತೆಯಿದ್ದ ಸ್ಟಿಕ್ ಗಳನ್ನು ಇಲಾಖೆಯಿಂದ ನೀಡಲಾಯಿತು. ಜಿಲ್ಲಾ ಅಂಗವಿಕಲ ಹಾಗೂ ವಿಕಲಚೇತನ ಮತ್ತು ಹಿರಿಯ ನಾಗರೀಕ ಸಬಲೀಕರಣ ಇಲಾಖೆಯ ಜಿಲ್ಲಾ ಯೋಜನಾಧಿಕಾರಿಗಳಾದ ಸರಸ್ವತಿ ಅವರು ಆಶ್ರಮಕ್ಕೆ ಒಮ್ಮೆ ಭೇಟಿ ನೀಡುತ್ತೇನೆ.

ಇಂತಹ ವಿಶೇಷ ಸಂಸ್ಥೆ ನಮ್ಮ ರಾಯಚೂರು ಜಿಲ್ಲೆಯಲ್ಲಿ ಬಹಳ ಅತ್ಯುನ್ನತವಾದ ಅಂತಹ ಸೇವೆಯನ್ನು ಒದಗಿಸುತ್ತಾ ಅದೆಷ್ಟೋ ಹಿರಿಯರನ್ನು ಮತ್ತು ತಮಗರಿವಿಲ್ಲದ ಬುದ್ಧಿಮಾಂದ್ಯರನ್ನು ರಕ್ಷಣೆ ಮಾಡುತ್ತಿರುವುದು ನಮ್ಮ ರಾಯಚೂರು ಜಿಲ್ಲೆಗೆ ತಂದ ಗೌರವವಾಗಿದೆ. ಮುಂದಿನ ದಿನಗಳಲ್ಲಿ ಸರ್ಕಾರದ ಆದೇಶದಂತೆ ನಾವು ಸೌಲಭ್ಯಗಳನ್ನು ತಮ್ಮ ಸಮಸ್ಯೆಗೆ ಒದಗಿಸುತ್ತೇವೆ ಎಂದು ಮಾತನಾಡಿ ಸೇವೆಗೆ ಉತ್ತಮ ಪ್ರತಿಕ್ರಿಯೆ ವ್ಯಕ್ತಪಡಿಸಿದರು. ಈ ಸಮಯದಲ್ಲಿ ಹಿರಿಯ ನಾಗರಿಕ ಸಬಲೀಕರಣ ಇಲಾಖೆಯ ಸಿಬ್ಬಂದಿಗಳಾದ ವಿನಯ್ ಕುಮಾರ್. ರಮೇಶ್. ಹಾಗೂ ಆಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸವ ಸ್ವಾಮಿ ಹಿರೇಮಠ ಸಲಹಾ ಸಮಿತಿಯ ಹಿರಿಯರುಗಳಾದ ವೀರಭದ್ರಗೌಡ ಗಿಣಿವಾರ. ಪಂಪನಗೌಡ ಭೀಮನ ಗೌಡ್ರು ಹರೇಟನೂರು ಇವರುಗಳು ಉಪಸ್ಥಿತರಿದ್ದರು.

## ಜಿಲ್ಲಾ, ತಾಲೂಕು ಮಟ್ಟದ ಅಧಿಕಾರಿಗಳಿಗೆ ಜೂನ್ 20ರಂದು ಮಾಹಿತಿ ಹಕ್ಕು ಕಾಯ್ದೆಯ ಕುರಿತು ಕಾರ್ಯಾಗಾರ: ಆಯುಕ್ತರಾದ ಬಿ.ವೆಂಕಟ ಸಿಂಗ್

ನೈಜ್ಯ ದೆಸೆ ನ್ಯೂಸ್

**ರಾಯಚೂರು ಜೂನ್ 09 (ಕರ್ನಾಟಕ ವಾರ್ತೆ): ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠದ ರಾಜ್ಯ ಮಾಹಿತಿ ಆಯುಕ್ತರಾದ ಬಿ.ವೆಂಕಟ ಸಿಂಗ್ ಹಾಗೂ ಬೆಂಗಳೂರು ಪೀಠದ ರಾಜ್ಯ ಮಾಹಿತಿ ಆಯುಕ್ತರುಗಳಾದ ರಾಮನ್ ಕೆ. ಹಾಗೂ ಡಾ. ರಿಚರ್ಡ್ ವಿನ್ಸೆಂಟ್ ಡೊಸೋಜ ಇವರುಗಳು ದಿನಾಂಕ:20–06–2026(ಶನಿವಾರ ) ರಂದು ರಾಯಚೂರು ಜಿಲ್ಲೆಗೆ ಆಗಮಿಸುತ್ತಿದ್ದು,**



ಸದರಿ ದಿನದಂದು ರಾಯಚೂರು ಜಿಲ್ಲೆಯ ಎಲ್ಲಾ ಇಲಾಖೆಗಳ ಜಿಲ್ಲಾ ಮಟ್ಟದ ಹಾಗೂ ಜಿಲ್ಲಾ ಪಂಚಾಯತ್ ವ್ಯಾಪ್ತಿಯ, ಕಂದಾಯ ಇಲಾಖೆಯ ಮತ್ತು ತಾಲೂಕ ಮಟ್ಟದ ಎಲ್ಲಾ ಅಧಿಕಾರಿಗಳು, ಪೊಲೀಸ್ ಇಲಾಖೆಯ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯತ್ ಕಾರ್ಯದರ್ಶಿಗಳಿಗೆ ಹಾಗೂ ಸಾರ್ವಜನಿಕ ಮಾಹಿತಿ ಅಧಿಕಾರಿಗಳಿಗೆ ಮಾಹಿತಿ ಹಕ್ಕು ಕಾಯ್ದೆಯ ಕುರಿತು ಕಾರ್ಯಾಗಾರ ಹಾಗೂ ಸಂವಾದ ನಡೆಸಲು ಉದ್ದೇಶಿಸಲಾಗಿದೆ. ಎಲ್ಲಾ ಇಲಾಖೆಗಳ ಜಿಲ್ಲಾ ಮಟ್ಟದ ಅಥವಾ ತಾಲೂಕ ಮಟ್ಟದ ಎಲ್ಲಾ ಅಧಿಕಾರಿಗಳು ಹಾಗೂ ಸಾರ್ವಜನಿಕ ಮಾಹಿತಿ ಅಧಿಕಾ–ರಿಗಳು ಈ ಕಾರ್ಯಾಗಾರಕ್ಕೆ ಮೇಲ್ಕಾಣಿಸಿದ ಎಲ್ಲಾ ಅಧಿಕಾ–ರಿಗಳು ತಪ್ಪದೇ ಹಾಜರಾಗುವಂತೆ ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠದ ರಾಜ್ಯ ಮಾಹಿತಿ ಆಯುಕ್ತರಾದ ಬಿ.ವೆಂಕಟ ಸಿಂಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


# ದೇವದುರ್ಗ: ಯುಪಿಐ ಲಿಂಕ್ ಮೂಲಕ ವ್ಯಕ್ತಿಗೆ 1.10 ಲಕ್ಷ ಆನ್‌ಲೈನ್ ವಂಚನೆ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ದೇವದುರ್ಗ ತಾಲೂಕಿನ ಜಹೂರ್ ಕಾಲೋನಿ ನಿವಾಸಿಯೊಬ್ಬರು ಯುಪಿಐ (UPI) ಲಿಂಕ್ ಹಾಗೂ ಅಪ–ರಿಚಿತ ದೂರವಾಣಿ ಕರೆಯನ್ನು ನಂಬಿ ?1,10,000 ಕಳೆದುಕೊಂಡಿರುವ ಸೈಬರ್ ವಂಚನೆ ಪ್ರಕರಣ ಬೆಳಕಿಗೆ ಬಂದಿದೆ.**


ಜಹೂರ್ ಕಾಲೋನಿ ನಿವಾಸಿ ಶೋಯಬ್ (38) ಎಂಬುವವರು ಈ ವಂಚನೆಗೆ ಒಳಗಾದವರಾಗಿದ್ದು, ಅಪರಿಚಿತ ವ್ಯಕ್ತಿಯೊಬ್ಬರ ಕರೆ ಹಾಗೂ ಯುಪಿಐ ವಹಿವಾಟಿನ ಮೂಲಕ ಅವರ ಬ್ಯಾಂಕ್ ಖಾತೆಗಳಿಂದ ಹಣ ವರ್ಗಾವಣೆಯಾಗಿದೆ ಎಂದು ತಿಳಿದುಬಂದಿದೆ. ಮೂರು ಹಂತಗಳಲ್ಲಿ ಹಣ ವರ್ಗಾವಣೆ ಜೂನ್ 6 ರಂದು ಸಂಜೆ ಸುಮಾರು ಒಂದು ಗಂಟೆಯ ಅವಧಿಯಲ್ಲಿ ವಂಚಕರು ಎರಡು






ಬ್ಯಾಂಕ್ ಖಾತೆಗಳಿಂದ ಹಣವನ್ನು ವರ್ಗಾಯಿಸಿಕೊಂಡಿದ್ದಾರೆ.

ಕರ್ನಾಟಕ ಬ್ಯಾಂಕ್ ಖಾತೆ – ಸಂಜೆ 05:50ಕ್ಕೆ ?50,000 – ಸಂಜೆ 06:48ಕ್ಕೆ 10,000 ಒಟ್ಟು ?60,000 ಹಣ ಕಡಿತಗೊಂಡಿದೆ. ಇಂಡಿಯನ್ ಬ್ಯಾಂಕ್ ಖಾತೆ–ಸಂಜೆ 06:02ಕ್ಕೆ ?50,000 ಹೀಗಾಗಿ ಒಟ್ಟು ?1,10,000 ಹಣ ವಂಚಕರ ಕೈ ಸೇರಿದೆ. ತಮ್ಮ ಖಾತೆಯಿಂದ ಹಣ ಕಡಿತವಾಗಿರುವುದನ್ನು



ಗಮನಿಸಿದ ಶೋಯಬ್ ಅವರು ತಕ್ಷಣವೇ ಜೂನ್ 7 ರಂದು ರಾಷ್ಟ್ರೀಯ ಸೈಬರ್ ಕ್ರೈಂ ಪೋರ್ಟಲ್‌ನಲ್ಲಿ ದೂರು ದಾಖಲಿಸಿದ್ದಾರೆ.

ವಂಚನೆಗೆ ಬಳಸಲಾಗಿದೆ ಎನ್ನಲಾದ ಮೊಬೈಲ್ ಸಂಖ್ಯೆ 9511515147 ಹಾಗೂ ವಹಿವಾಟಿನ ಯುಟಿಆರ್ (UTR) ಸಂಖ್ಯೆಗಳ ಆಧಾರದ ಮೇಲೆ ಸೈಬರ್ ಪೊಲೀಸರು ತನಿಖೆ ಆರಂಭಿಸಿದ್ದಾರೆ. ಸಾರ್ವಜನಿಕರಿಗೆ ಎಚ್ಚರಿಕೆ ಅಪರಿಚಿತ ವ್ಯಕ್ತಿಗಳಿಂದ ಬರುವ ಕರೆಗಳು, ಲಾಟರಿ ಆಮಿಷಗಳು, ಬ್ಯಾಂಕ್ ಮಾಹಿತಿ ಕೇಳುವ ಸಂದೇಶಗಳು ಹಾಗೂ ಯುಪಿಐ ಲಿಂಕ್‌ಗಳನ್ನು ಕ್ಲಿಕ್ ಮಾಡುವ ಸಂದರ್ಭಗಳಲ್ಲಿ ಸಾರ್ವಜನಿಕರು ಹೆಚ್ಚಿನ ಎಚ್ಚರಿಕೆ ವಹಿಸಬೇಕು ಎಂದು ಸೈಬರ್ ಕ್ರೈಂ ಪೊಲೀಸರು ಮನವಿ ಮಾಡಿದ್ದಾರೆ. ಸೈಬರ್ ವಂಚನೆಗೆ ಒಳಗಾದ ತಕ್ಷಣವೇ ರಾಷ್ಟ್ರೀಯ ಸಹಾಯವಾಣಿ ಸಂಖ್ಯೆ 1930 ಗೆ ಕರೆ ಮಾಡಿ ಅಥವಾ ರಾಷ್ಟ್ರೀಯ ಸೈಬರ್ ಕ್ರೈಂ ಪೋರ್ಟಲ್‌ನಲ್ಲಿ ದೂರು ದಾಖಲಿಸುವಂತೆ ಅಧಿಕಾರಿಗಳು ತಿಳಿಸಿದ್ದಾರೆ. ವಂಚನೆಗೆ ಒಳಗಾಗಿರುವ ಶೋಯಬ್ ಅವರ ತಂದೆ ಮೈನುದ್ದೀನ್ ಅವರು ಸೈಬರ್ ಕ್ರೈಂ ಇಲಾಖೆಯ ತನಿಖೆಯಿಂದ ಹಣ ಮರಳಿ ದೊರೆಯುವ ಭರವಸೆ ವ್ಯಕ್ತಪಡಿಸಿದ್ದಾರೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಜೂನ್ 11ರಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ನೇರ ಸಂದರ್ಶನ

ನೈಜ್ಯ ದೆಸೆ ನ್ಯೂಸ್

**ರಾಯಚೂರು ಜೂನ್ 09 (ಕರ್ನಾಟಕ ವಾರ್ತೆ): ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಜೂನ್ 11ರ ಬೆಳಿಗ್ಗೆ 10ಗಂಟೆಯಿಂದ ಮಧ್ಯಾಹ್ನ 1 ಗಂಟೆವರೆಗೆ ನೇರ ಸಂದರ್ಶನ ಆಯೋಜಿಸಲಾಗಿದ್ದು, ಆಸಕ್ತ ಅಭ್ಯರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗುವಂತೆ ಕೋರಲಾಗಿದೆ.**

ನೇರ ಸಂದರ್ಶನದಲ್ಲಿ ಎರಡು ಖಾಸಗಿ ಕಂಪನಿಗಳು ಭಾಗವಹಿಸಿ

## ನೇರ ಸಂದರ್ಶನ

ತಮ್ಮಲ್ಲಿ ಖಾಲಿ ಇರುವ ಹುದ್ದೆಗಳನ್ನು ನೇರವಾಗಿ ಭರ್ತಿ ಮಾಡಿಕೊಳ್ಳಲಿದ್ದಾರೆ. ಅರ್ಹತೆಗಳು: ಎಸ್.ಎಸ್.ಎಲ್.ಸಿ, ಪಿ.ಯು.ಸಿ ಹಾಗೂ ಎಲ್ಲಾ ಪದವೀಧರ ಆಸಕ್ತ 18 ರಿಂದ 28 ವರ್ಷಗಳ ವರೆಗಿನ ಅಭ್ಯರ್ಥಿಗಳು ಈ ಮೇಳದಲ್ಲಿ ಭಾಗವಹಿಸಬಹುದಾಗಿದೆ. ವಿದ್ಯಾರ್ಹತೆಯ ಅಂಕಪಟ್ಟಿಗಳ ಜೆರಾಕ್ಸ್ ಪ್ರತಿಗಳು ಮತ್ತು ತಮ್ಮ ಬಯೋಡೆಟಾ,ಆಧಾರ್ ಕಾರ್ಡ್ ಪ್ರತಿ, ಭಾವಚಿತ್ರಗನ್ನು ಸಲ್ಲಿಸಬೇಕು.

ನೇರ ಸಂದರ್ಶನದಲ್ಲಿ ಭಾಗವಹಿಸಲು ಯಾವುದೇ ಶುಲ್ಕವಿರುವುದಿಲ್ಲ, ಬದಲಾಗಿ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗಬಹುದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಬಾಲಾಜಿ ಕಾಂಪ್ಲೆಕ್ಸ್, ನೆಲ ಮಹಡಿ, ಗೂಡ್ ಶೆಡ್ ರಸ್ತೆ, ಸ್ಟೇಷನ್ ಏರಿಯಾ, ರಾಯಚೂರು ಹಾಗೂ ದೂರವಾಣಿ ಸಂಖ್ಯೆ 08532–231684, 9916931616, 9008211750ಗೆ ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ನವೀನ ಕುಮಾರ್ ಸಂಗೇಪಾಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಾಲೆ–ಕಾಲೇಜುಗಳ ಆರಂಭದೊಂದಿಗೆ ಹಾಸ್ಟೆಲ್‌ಗಳನ್ನು ಆರಂಭಿಸಲು ಎಸ್‌ಎಫ್‌ಐ ಆಗ್ರಹ

# ಹಾಸ್ಟೆಲ್ ವಿದ್ಯಾರ್ಥಿಗಳ ಆಹಾರ ಭತ್ಯೆಯನ್ನು ಕನಿಷ್ಠ 4,500ಕ್ಕೆ ಹೆಚ್ಚಿಸಿ.: ಮಹಾಲಿಂಗ ದೊಡ್ಡಮನಿ

ನೈಜ್ಯ ದೆಸೆ ನ್ಯೂಸ್

**ದೇವದುರ್ಗ: 2026–27ನೇ ಶೈಕ್ಷಣಿಕ ವರ್ಷ ಆರಂಭಗೊಂಡು ಶಾಲೆ–ಕಾಲೇಜುಗಳಲ್ಲಿ ತರಗತಿಗಳು ಪ್ರಾರಂಭವಾಗಿದ್ದರೂ, ವಿದ್ಯಾರ್ಥಿ ನಿಲಯಗಳನ್ನು (ಹಾಸ್ಟೆಲ್‌ಗಳನ್ನು) ಇನ್ನೂ ಆರಂಭಿಸದಿರುವುದನ್ನು ಭಾರತ ವಿದ್ಯಾರ್ಥಿ ಫೆಡರೇಷನ್ (ಎಸ್‌ಎಫ್‌ಐ) ದೇವದುರ್ಗ ತಾಲೂಕು ಸಮಿತಿ ಮುಖಂಡರು ಖಂಡಿಸಿ ಕರ್ನಾಟಕ ಸರ್ಕಾರದ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರಿಗೆ ಬರೆದ ಮನವಿ ಪತ್ರವನ್ನು ನಾಡ ತಹಸೀಲ್ದಾರ್ ಗೋವಿಂದ ಅವರ ಮೂಲಕ ಮಂಗಳವಾರ ಸಲ್ಲಿಸಿದರು,**

ಜಾಲಹಳ್ಳಿ ಅಂಬೇಡ್ಕರ್ ಸರ್ಕಲ್ ಬಳಿ ನೂರಾರು ವಿದ್ಯಾರ್ಥಿಗಳು,ಪಾಲಕರ ಜೊತೆ ಸೇರಿ ಎಸ್ ಎಫ್ ಐ ನೇತೃತ್ವದಲ್ಲಿ ಬ್ರಹತ್ ಪ್ರತಿಭಟನೆ ನಡೆಸಿದರು, ಬಳಿಕ ಎಸ್ ಎಫ್ ಐ ತಾಲೂಕು ಅಧ್ಯಕ್ಷ ಮಹಾಲಿಂಗ ದೊಡ್ಡಮನಿ ಮಾತನಾಡಿ ಶಾಲೆ–ಕಾಲೇಜುಗಳ ಆರಂಭದೊಂದಿಗೆ ಹಾಸ್ಟೆಲ್‌ಗಳನ್ನು ಕೂಡ ತಕ್ಷಣ ಆರಂಭಿಸಬೇಕೆಂದು ರಾಜ್ಯ ಸರ್ಕಾರವನ್ನು ಆಗ್ರಹಿಸಿದರು.

ಹಾಸ್ಟೆಲ್ ಪ್ರವೇಶಕ್ಕಾಗಿ ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿಗಳು ಆಯ್ಕೆ ಪಟ್ಟಿ ಪ್ರಕಟವಾಗುವ ನಿರೀಕ್ಷೆಯಲ್ಲಿ ಪ್ರತಿದಿನ ದೂರದ ಗ್ರಾಮಗಳಿಂದ ಕಾಲೇಜುಗಳಿಗೆ ಸಂಚರಿಸಿ ಹೆಚ್ಚಿನ ಹಣ ಖರ್ಚು ಮಾಡುತ್ತಿದ್ದಾರೆ. ಸಮರ್ಪಕ ಬಸ್ ಸೌಲಭ್ಯವಿಲ್ಲದ ಕಾರಣ ವಿದ್ಯಾರ್ಥಿಗಳು ಸಾಕಷ್ಟು ತೊಂದರೆ ಅನುಭವಿಸುತ್ತಿದ್ದು, ಕೂಡಲೇ ಆಯ್ಕೆ ಪಟ್ಟಿ ಪ್ರಕಟಿಸಿ ಹಾಸ್ಟೆಲ್ ಸೌಲಭ್ಯ ಕಲ್ಪಿಸಬೇಕು ಎಂದು ಒತ್ತಾಯಿಸಿದ್ದರು,

ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಸರ್ಕಾರದ ಆದೇಶದಂತೆ ಎಲ್ಲ ಅರ್ಹ ವಿದ್ಯಾರ್ಥಿಗಳಿಗೂ ವಸತಿ ಸೌಲಭ್ಯ ಒದಗಿಸಬೇಕು. ಅಲ್ಲದೆ, ಮೆರಿಟ್ ಆಧಾರಿತ ಆಯ್ಕೆ ಪದ್ಧತಿಯನ್ನು ಕೈಬಿಟ್ಟು, ಅರ್ಜಿ ಸಲ್ಲಿಸಿದ ಎಲ್ಲ ವಿದ್ಯಾರ್ಥಿಗಳಿಗೆ ಹಾಸ್ಟೆಲ್ ವ್ಯವಸ್ಥೆಯನ್ನು ವಿಸ್ತರಿಸಬೇಕು ಎಂದ ಹೇಳಿದರು




ಬಳಿಕ ಕಟ್ಟಡ ಮತ್ತು ನಿರ್ಮಾಣ ಕಾರ್ಮಿಕರ ಸಂಘಟನೆಯ ರಾಜ್ಯ ಕಾರ್ಯದರ್ಶಿ ಶಬ್ಬೀರ್ ಜಾಲಹಳ್ಳಿ. ಮಾತನಾಡಿ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಹೆಚ್ಚುವರಿ ಹಾಸ್ಟೆಲ್‌ಗಳನ್ನು ಸ್ಥಾಪಿಸಿ, ಉತ್ತಮ ಗುಣಮಟ್ಟದ ಆಹಾರ, ಶುಚಿತ್ವ ಕಿಟ್‌ಗಳು, ತಟ್ಟೆ, ಲೋಟ, ಹಾಸಿಗೆ, ಬೆಡ್‌ಶೀಟ್ ಹಾಗೂ ಹೊದಿಕೆ ಸೇರಿದಂತೆ ಅಗತ್ಯ ವಸ್ತುಗಳನ್ನು ಒದಗಿಸಬೇಕು ಜೊತೆಗೆ ಸುಸಜ್ಜಿತ ಗ್ರಂಥಾಲಯ, ಸ್ಪರ್ಧಾತ್ಮಕ ಪರೀಕ್ಷೆಗಳ ಪುಸ್ತಕಗಳು, ಕಂಪ್ಯೂಟರ್ ಲ್ಯಾಬ್, ಉಚಿತ ವೈ–ಫೈ, ಶುದ್ಧ ಕುಡಿಯುವ ನೀರು ಸೇರಿದಂತೆ ಎಲ್ಲಾ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಬೇಕು. ಬಯೋಮೆಟ್ರಿಕ್ ಹಾಜರಾತಿ ವ್ಯವಸ್ಥೆಯನ್ನು ಕೈಬಿಟ್ಟು, ವಿದ್ಯಾರ್ಥಿಗಳ ಆಹಾರ ಭತ್ಯೆಯನ್ನು ಕನಿಷ್ಠ ?4,500ಕ್ಕೆ ಹೆಚ್ಚಿಸಬೇಕೆಂದು ಹೇಳಿದರು

ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಸರ್ಕಾರ ತಕ್ಷಣ ಅಗತ್ಯ ಕ್ರಮ ಕೈಗೊಂಡು, ಹಾಸ್ಟೆಲ್‌ಗಳನ್ನು ಕೂಡಲೇ ಆರಂಭಿಸಬೇಕು , ಜಾಲಹಳ್ಳಿ ಯಲ್ಲಿ ಮಹಿಳಾ ವಸತಿ ನಿಲಯ ಮಂಜೂರು ಮಾಡಲು ಒತ್ತಾಯಿಸಿದರು, ಇದೆ ಸಂದರ್ಭದಲ್ಲಿ ಎಸ್ ಎಫ್ ಐ ತಾಲೂಕು ಸಮಿತಿ ಮುಖಂಡರಾದ ಸಂತೋಷ್ ತ್ಯಾಪ್ಲಿ, ಅಭಿಷೇಕ್ . ಸಿಐಟಿಯು ಜಿಲ್ಲಾ ಮುಖಂಡ ಗಿರಿಯಪ್ಪ ಪೂಜಾರಿ,ಡಿವೈಎಫ್‌ಐ ಅಧ್ಯಕ್ಷ ರಿಯಾಜ್ ಆರ್ಥಿ, ಕಾರ್ಯದರ್ಶಿ ರಾಜು ನಾಯಕ, ಮೌನೇಶ, ಗ್ರಾಮ ಪಂಚಾಯಿತಿ ಸದಸ್ಯ ಮುಕ್ತಂ ಪಾಷಾ, ಬಸವರಾಜ ವಂದಲಿ, ಹನುಮಂತ ಮಡಿವಾಳ,ರಾಮಣ್ಣ, ಮೌನೇಶ ಚಪ್ಪಳಿಕಿ, ಬಾಲು ಫೋಷಾಲ್, ಅಮೀರ್ ಪಾಟೀಲ್, ರಿಯಾಜ್ ಖುರ್ಷಿ, ಮತ್ತು ಇತರರು, ವರದಿ: ಖಾಜಾಹುಸೇನ್ ಬಾಬಾ ಜಾಲಹಳ್ಳಿ

## ನೇಮಕಾತಿ ಪ್ರಕಟಣೆ

**ಏಇಂ ನೇಮಕಾತಿ 2026 945 ಕೃಷಿ ಅಧಿಕಾರಿ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ**

KEA ನೇಮಕಾತಿ 2026: 945 ಕೃಷಿ ಅಧಿಕಾರಿ (AO), ಸಹಾಯಕ ಕೃಷಿ ಅಧಿಕಾರಿ (AAO) ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಕರ್ನಾಟಕ ಪರೀಕ್ಷಾ ಪ್ರಾಧಿಕಾರ (KEA) ಏಪ್ರಿಲ್ 2026 ರ ಅಧಿಕೃತ ಅಧಿಸೂಚನೆಯ ಮೂಲಕ ಕರ್ನಾಟಕ ಕೃಷಿ ಇಲಾಖೆ, ಕೃಷಿ ಅಧಿಕಾರಿ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ (30 ಮೇ 2026). ಕರ್ನಾಟಕ ಸರ್ಕಾರದಲ್ಲಿ ವೃತ್ತಿಜೀವನವನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 20–ಜೂನ್–2026 ರಂದು ಅಥವಾ ಮೊದಲು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 30–05–2026 ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 20–ಜೂನ್–2026 ಅರ್ಜಿ ಶುಲ್ಕ ಪಾವತಿಸಲು ಕೊನೆಯ ದಿನಾಂಕ: 22–ಜೂನ್–2026 ಕೆಇಎ ಪರೀಕ್ಷಾ ದಿನಾಂಕ: ಕನ್ನಡ ಪರೀಕ್ಷಾ ಪತ್ರಿಕೆ–1: 25ನೇ ಜುಲೈ 2026 10:30 ರಿಂದ 12:30 ರವರೆಗೆ ಕನ್ನಡ ಪರೀಕ್ಷಾ ಪತ್ರಿಕೆ–2: 25ನೇ ಜುಲೈ 2026 ಮಧ್ಯಾಹ್ನ 2:30 ರಿಂದ 4:30 ರವರೆಗೆ ಅಧಿಕೃತ ವೆಬ್‌ಸೈಟ್: cetonline.karnataka.gov.in

## ಮಸ್ಕಿ: ಪ್ರೊ. ಬಿ.ಕೆ. ಕೃಷ್ಣಪ್ಪನವರ ಜನ್ಮದಿನ ಆಚರಣೆ

**ನೈಜ್ಯ ದೆಸೆ ನ್ಯೂಸ್**

**ಮಸ್ಕಿ: ಪಟ್ಟಣದ ಗಾಂಧಿನಗರದ ಅಂಬೇಡ್ಕರ್ ಪಾರ್ಕ್‌ನಲ್ಲಿ ದಲಿತ ಸಂಘರ್ಷ ಸಮಿತಿಯ ಸಂಸ್ಥಾಪಕರಾದ ಪ್ರೊ. ಬಿ.ಕೆ. ಕೃಷ್ಣಪ್ಪ ಅವರ ಜನ್ಮದಿನವನ್ನು ಆಚರಿಸಲಾಯಿತು.**

ಈ ಸಂದರ್ಭದಲ್ಲಿ ದಲಿತ ಸಾಹಿತಿ ಸಿ. ದಾನಪ್ಪ ನಿಲೋಗಲ್ ಅವರು ಅಂಬೇಡ್ಕರ್ ಪ್ರತಿಮೆಗೆ ಹಾಗೂ ಪ್ರೊ. ಬಿ.ಕೆ. ಕೃಷ್ಣಪ್ಪ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಅವರ ಸಮಾಜಮುಖಿ ಹೋರಾಟ, ದಲಿತ ಸಮುದಾಯದ ಏಳಿಗೆಗಾಗಿ ನೀಡಿದ ಕೊಡುಗೆಗಳನ್ನು ಸ್ಮರಿಸಲಾಯಿತು. ಕಾರ್ಯಕ್ರಮದಲ್ಲಿ ಹಿರಿಯ ದಲಿತ ಸಾಹಿತಿ ಹಾಗೂ ಪ್ರೊ. ಬಿ.ಕೆ. ಕೃಷ್ಣಪ್ಪನವರ ಹೋರಾಟದ




ಬದುಕು ಇಂದಿನ ಯುವಜನತೆಗೆ ಮಾದರಿಯಾಗಿದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಸಮಾಜ ಹಿರಿಯ ಮುಖಂಡರಾದ ದೊಡ್ಡಪ್ಪ ಮುರಾರಿ, ಕರಿಯಪ್ಪ ಕಟ್ಟಿಮನಿ (ಪುರಸಭೆ ಸದಸ್ಯರು, ಮಸ್ಕಿ), ಮೌನೇಶ ಮುರಾರಿ (ಪುರಸಭೆ ಸದಸ್ಯರು, ಮಸ್ಕಿ), ದುರ್ಗಪ್ರಸಾದ್ ತೋರಣದಿನ್ನಿ, ಕಾಶಿಂ ಮುರಾರಿ, ಬಾಲಸ್ವಾಮಿ ಜಿನ್ನಾಪೂರ, ಮರಿಸ್ವಾಮಿ ಬೆನಕನಾಳ ಸೇರಿದಂತೆ ಹಲವಾರು ಮುಖಂಡರು, ಕಾರ್ಯಕರ್ತರು ಹಾಗೂ ಸಾರ್ವಜನಿಕರು ಭಾಗವಹಿಸಿ ಪ್ರೊ. ಬಿ.ಕೆ. ಕೃಷ್ಣಪ್ಪ ಅವರ ಆದರ್ಶಗಳನ್ನು ಸ್ಮರಿಸಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಮಕ್ಕಳು ಹಾಗೂ ಯುವಕರಿಗೆ ಸಾಮಾಜಿಕ ಜಾಗೃತಿ, ಶಿಕ್ಷಣ ಮತ್ತು ಸಮಾನತೆಯ ಮಹತ್ವದ ಕುರಿತು ಅರಿವು ಮೂಡಿಸಲಾಯಿತು. ಅಂತಿಮವಾಗಿ ಪ್ರೊ. ಬಿ.ಕೆ. ಕೃಷ್ಣಪ್ಪ ಅವರ ತತ್ವಾದರ್ಶಗಳನ್ನು ಮುಂದುವರಿಸಿಕೊಂಡು ಸಮಾಜದ ಶೋಷಿತ ಮತ್ತು ವಂಚಿತ ವರ್ಗಗಳ ಹಕ್ಕುಗಳಿಗಾಗಿ ಹೋರಾಟ ಮುಂದುವರಿಸುವ ಸಂಕಲ್ಪ ಮಾಡಲಾಯಿತು.

## ಜಮೀರ್ ಅಹ್ಮದ್‌ಗೆ ಡಿಸಿಎಂ, ಜೆ. ಎನ್. ಗಣೇಶಗೆ ಸಚಿವ ಸ್ಥಾನ ನೀಡಬೇಕೆಂದು ಕಂಪ್ಲಿ ಅಂಜುಮನ್ ಖಿದ್ಮತ್–ಏ–ಇಸ್ಲಾಂ ವತಿಯಿಂದ ಒತ್ತಾಯ

**ನೈಜ್ಯ ದೆಸೆ ನ್ಯೂಸ್**

**ಬಳ್ಳಾರಿ / ಕಂಪ್ಲಿ : ಮಾಜಿ ಸಚಿವ ಬಿ. ಝಡ್ ಜಮೀರ್ ಅಹ್ಮದ್‌ಗೆ ಖಾನ್ ರವರಿಗೆ ಡಿಸಿಎಂ ಮತ್ತು ಶಾಸಕ ಜೆ.ಎನ್.ಗಣೇಶಗೆ ಸಚಿವ ಸ್ಥಾನ ನೀಡಬೇಕೆಂದು ಕಂಪ್ಲಿ ಅಂಜುಮನ್ ಖಿದ್ಮತ್–ಏ–ಇಸ್ಲಾಂ ಅಧ್ಯಕ್ಷ ಅಬ್ದುಲ್ ಕರೀಂ ಲಡ್ಡು ಒತ್ತಾಯಿಸಿದರು.**




ಪಟ್ಟಣದ ಅತಿಥಿ ಗೃಹದಲ್ಲಿ ಕಂಪ್ಲಿ ಅಂಜುಮನ ಖಿದ್ಮತ್–ಏ–ಇಸ್ಲಾಂ ವತಿಯಿಂದ ಸೋಮವಾರ ಸಂಜೆ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಕಳೆದ ಮೂರು ವರ್ಷದ ಸಿದ್ದರಾಮಯ್ಯ ಸರ್ಕಾರದಲ್ಲಿ ಸಚಿವರಾಗಿ ಬಿ. ಝಡ್ ಜಮೀರ್ ಅಹ್ಮದ್ ಅವರು ಸಾಕಷ್ಟು ಜನಪರ ಕೆಲಸ ಮಾಡಿದ್ದಾರೆ. ಸದಾ ಜನರ ಸೇವೆಯಲ್ಲಿ ಮುಂಚೂಣಿಯಲ್ಲಿರುವ ಜಮೀರ್ ಅಹ್ಮದ್ ಇವರಿಗೆ ಸಿಎಂ ಡಿ.ಕೆ.ಶಿವಕುಮಾರ ನೇತೃತ್ವದ ಸರ್ಕಾರದಲ್ಲಿ ಡಿಸಿಎಂ ಸ್ಥಾನ ನೀಡುವ ಮೂಲಕ ಕಾಂಗ್ರೆಸ್ ವರಿಷ್ಠರು, ಹೈಕಮಾಂಡ್ ಮತ್ತಷ್ಟು ಜನರ ಸೇವೆಗೆ ಅನುವು ಮಾಡಬೇಕು. ಮತ್ತು ಸ್ಥಳೀಯ ಜನಪ್ರಿಯ ಶಾಸಕ ಕ್ಷೇತ್ರದ ಜನರ ಕಷ್ಟಗಳಿಗೆ ಸ್ಪಂದಿಸುವ ಅಭಿವೃದ್ಧಿ ಹರಿಕಾರ ಜೆ.ಎನ್. ಗಣೇಶಗೆ ಸಚಿವ ಸ್ಥಾನ ಕಲ್ಪಿಸಬೇಕು. ಇಲ್ಲವಾದಲ್ಲಿ ಮುಂದಿನ ದಿನದಲ್ಲಿ ಉಗ್ರ ಹೋರಾಟಕ್ಕೆ ಇಳಿಯುವ ಜೊತೆಗೆ ಬರುವ ಚುನಾವಣೆಗಳಲ್ಲಿ ತಕ್ಕಪಾಠ ಕಲಿಸಲಾಗುವುದು ಎಂದರು. ನಂತರ ಪ್ರಧಾನ ಕಾರ್ಯದರ್ಶಿ ಯು.ಜಹಿರುದ್ದೀನ್ ಮಾತನಾಡಿ, ಕಂಪ್ಲಿ ಕ್ಷೇತ್ರದಲ್ಲಿ ಶಾಸಕ ಗಣೇಶ ಜನಪರ ಕಾರ್ಯದೊಂದಿಗೆ ಅಚ್ಚುಮೆಚ್ಚಿನ ನಾಯಕರಾಗುವ ಜೊತೆಗೆ ರಾಜ್ಯದಲ್ಲಿ ಒಂದೊಳ್ಳೇ ಹೆಸರು ಪಡೆದುಕೊಂಡಿದ್ದಾರೆ. ಸದಾ ಕ್ಷೇತ್ರದ ಜನರ ಮಧ್ಯದಲ್ಲಿದ್ದುಕೊಂಡು ಅವರ ಕಷ್ಟಗಳನ್ನು ಆಲಿಸಿ, ಸೌಲಭ್ಯಗಳನ್ನು ಕಲ್ಪಿಸಿದ್ದಾರೆ. ಮತ್ತು ಜಮೀರ್ ಅಹ್ಮದ್ ಅವರ ಸೇವೆ ದೊಡ್ಡದಿದೆ, ಸರ್ವಜನರ ಆದ್ದರಿಂದ ಜಮೀರ್ ಅಹ್ಮದ್‌ಗೆ ಡಿಸಿಎಂ ಮತ್ತು ಜೆ. ಎನ್.ಗಣೇಶಗೆ ಸಚಿವ ಸ್ಥಾನ ನೀಡಲೇಬೇಕೆಂದು ಆಗ್ರಹಿಸಿದರು. ಈ ಸಂದರ್ಭದಲ್ಲಿ ಉಪಾಧ್ಯಕ್ಷ ಸೈಯದ್ ರಾಜಾಸಾಬ್, ಖಜಾಂಚಿ ಮೌಲಾ ಹುಸೇನ್, ಸದಸ್ಯರಾದ ಕೆ.ಮೆಹಬೂಬ್, ಮಸ್ತಾನ್ ವಲಿ ಕಡಪಾ, ಅತ್ತಾವುಲ್ಲಾ ರೆಹಮಾನ್, ಸೈಯದ್ ಗೇಸುದರಾಜ್ ಖಾದ್ರಿ, ಎನ್.ಯುನೂಸ್, ಮುಖಂಡರಾದ ಸೈಯದ್ ಉಸ್ಮಾನ್, ವಾಹಿದಸಾಬ್, ಮೆಹಮೂದ್ ಸಾಬ್, ವರ್ದಿ ಜಾಫರ್, ಅಬ್ದುಲ್ ವಾಹೀದ್ ಸೇರಿದಂತೆ ಅನೇಕರಿದ್ದರು.

## ಮೇ, ಜೂನ್ ಮಾಹೆಗೆ ಪಡಿತರ ಧಾನ್ಯ ವಿತರಣೆ: ಜಿಲ್ಲಾಧಿಕಾರಿ ಪೂವಿತಾ ಎಸ್.

**ನೈಜ್ಯ ದೆಸೆ ನ್ಯೂಸ್**

**ರಾಯಚೂರು ಜೂನ್ 09 (ಕರ್ನಾಟಕ ವಾರ್ತೆ): ರಾಯಚೂರಿನ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯಿಂದ 2026ರ ಮೇ ಮತ್ತು ಜೂನ್ ಮಾಹೆಗೆ ಪಡಿತರ ಧಾನ್ಯಗಳನ್ನು ವಿತರಣೆ ಮಾಡಲಾಗುತ್ತಿದೆ ಎಂದು ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ತಿಳಿಸಿದ್ದಾರೆ.**



ರಾಜ್ಯ ಸರ್ಕಾರದ ಅನ್ನಭಾಗ್ಯ ಯೋಜನೆಯಡಿ ಆಹಾರ ಧಾನ್ಯಗಳನ್ನು ವಿತರಣೆ ಮಾಡಲು ಸರ್ಕಾರವು ನಿರ್ದೇಶಿಸಿರುವ ಹಿನ್ನಲೆಯಲ್ಲಿ ರಾಜ್ಯ ಸರ್ಕಾರದ ಮಾರ್ಗಸೂಚಿಂತೆ ಏಕ ಸದಸ್ಯ, ದ್ವಿ–ಸದಸ್ಯ ಮತ್ತು ತ್ರಿ–ಸದಸ್ಯ ಫಲಾನುಭವಿಗಳಿರುವ ಎಎವೈ ಪಡಿತರ ಚೀಟಿಗಳನ್ನು ಹೊರತುಪಡಿಸಿ ನಾಲ್ಕು ಮತ್ತು ನಾಲ್ಕಕಿಂತ ಹೆಚ್ಚಿನ ಸದಸ್ಯರುಳ್ಳ ಕೇಂದ್ರ ಹಾಗೂ ರಾಜ್ಯ ವ್ಯಾಪ್ತಿಯ ಅಂತ್ಯೋದಯ (ಎಎವೈ) ಮತ್ತು ಪಿ.ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಯಲ್ಲಿನ ಪ್ರತಿ ಫಲಾನುಭವಿಗೆ 2026ರ ಮೇ ಮಾಹೆಯ 05 ಕೆ.ಜಿ ಮತ್ತು 2026ರ ಜೂನ್ ಮಾಹೆಯ 05 ಕೆ.ಜಿ ಅಕ್ಕಿ ಹೀಗೆ ಒಟ್ಟು 10 ಕೆ.ಜಿ ಅಕ್ಕಿಯನ್ನು ಉಚಿತವಾಗಿ ವಿತರಿಸಲಾಗುವುದು.

ಪಡಿತರ ಚೀಟಿದಾರರು ಪಡಿತರ ಪಡೆಯುವ ಸಮಯದಲ್ಲಿ ಒಂದೇ ಬಾರಿ ಬಯೋಮೆಟ್ರಿಕ್ ನೀಡುವುದು ಮತ್ತು ಅನ್ನಸುವಿಧಾ ಯೋಜನೆಯ ಪಡಿತರ ಫಲಾನುಭವಿಗಳು 2026ರ ಜೂನ್ ಮಾಹೆಯಲ್ಲಿ ನ್ಯಾಯಬೆಲೆ ಅಂಗಡಿಗೆ ಭೇಟಿ ನೀಡಿ ಒಂದು ಬಾರಿ ಬಯೋಮೆಟ್ರಿಕ್ ನೀಡಿ ಪಡಿತರವನ್ನು ಪಡೆದುಕೊಳ್ಳಬಹುದಾಗಿದೆ. ಒಂದು ರಾಷ್ಟ್ರ ಒಂದು ಪಡಿತರ ಚೀಟಿ (ಅಂತರ್ ರಾಜ್ಯ/ ಅಂತರ್ ಜಿಲ್ಲೆ) ಪೋರ್ಟೆಬಿಲಿಟಿ ಜಾರಿಯಲ್ಲಿರುವುದರಿಂದ ಯಾವುದೇ ರಾಜ್ಯದ ಪಡಿತರ ಚೀಟಿದಾರರು ಯಾವುದೇ ವರ್ಗದ ಪಡಿತರ ಚೀಟಿದಾರರು ಯಾವುದೇ ನ್ಯಾಯಬೆಲೆ ಅಂಗಡಿಯಲ್ಲಿ ಪಡಿತರವನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ.

ಯಾವುದೇ ನ್ಯಾಯಬೆಲೆ ಅಂಗಡಿಕಾರರು ಕಡಿಮೆ ಪ್ರಮಾಣದ ಪಡಿತರವನ್ನು ವಿತರಣೆ ಮಾಡಿದ್ದಲ್ಲಿ, ಹಣ ಕೇಳಿದ್ದಲ್ಲಿ ಮತ್ತು ಇತರೆ ದೂರುಗಳಿಗೆ ನಿಶುಲ್ಕ ದೂರವಾಣಿ ಸಂಖ್ಯೆ 1967ಗೆ ಹಾಗೂ ತಾಲ್ಲೂಕಿನಲ್ಲಿರುವ ತಹಶೀಲ್ದಾರರ ಕಛೇರಿಗೆ ಅಥವಾ ಜಿಲ್ಲೆಯ ಉಪನಿರ್ದೇಶಕರ ಕಛೇರಿಗೆ ದೂರನ್ನು ಸಲ್ಲಿಸಬಹುದಾಗಿದೆ. ಈ ಯೋಜನೆಯಡಿ ವಿತರಿಸಲಾದ ಆಹಾರ ಧಾನ್ಯಗಳನ್ನು ಹಣಕ್ಕಾಗಿ ಪಡಿತರ ಚೀಟಿದಾರರು ಮಾರಾಟ ಮಾಡುವುದಾಗಲಿ ಅಥವಾ ಸಂಗ್ರಹಣೆ ಮಾಡುವುದು ಕಂಡುಬಂದಲ್ಲಿ ಅಂತಹ ಪಡಿತರ ಚೀಟಿದಾರರಿಗೆ ವಿತರಿಸಲಾದ ಆಹಾರ ಧಾನ್ಯಗಳಿಗೆ ಮುಕ್ತ ಮಾರುಕಟ್ಟೆ ದರಕ್ಕೆ ದಂಡ ವಿಧಿಸಲಾಗುವುದು ಮತ್ತು ಈ ಪಡಿತರ ಚೀಟಿಯನ್ನು ಆರು ತಿಂಗಳ ಅವಧಿಗೆ ಅಮಾನತ್ತುಗೊಳಿಸಲಾಗುವುದು. ವಿಶೇಷ ಗಮನಕ್ಕೆ: ಏಕ ಸದಸ್ಯ, ದ್ವಿ–ಸದಸ್ಯ ಮತ್ತು ತ್ರಿ–ಸದಸ್ಯ ಫಲಾನುಭವಿಗಳಿರುವ ಎಎವೈ ಪಡಿತರ ಚೀಟಿಗಳಿಗೆ 2026ರ ಜೂನ್ ಮಾಹೆಯಲ್ಲಿ ಹಂಚಿಕೆಯು ಇರುವುದಿಲ್ಲ. 2026ರ ಮೇ ಮತ್ತು ಜೂನ್ ಮಾಹೆಯ ಅನ್ನಭಾಗ್ಯ ಯೋಜನೆಯಡಿ ವಿತರಿಸಲಾಗುವ 10 ಕೆಜಿ ಅಕ್ಕಿಯನ್ನು ಪಡೆಯಲು ಒಂದೇ ಬಾರಿ ಬಯೋಮೆಟ್ರಿಕ್ ದೃಢೀಕರಣ ನೀಡಿ ಪಡೆಯಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಯಚೂರು ಮಹಾನಗರ ಪಾಲಿಕೆ: ಬೃಹತ್ ಘನತ್ಯಾಜ್ಯ ನಿರ್ವಹಣಾ ಕರ್ತವ್ಯ

**ನೈಜ್ಯ ದೆಸೆ ನ್ಯೂಸ್**

**ರಾಯಚೂರು ಜೂನ್ 09 (ಕರ್ನಾಟಕ ವಾರ್ತೆ): ಸರ್ಕಾರದ ಅಧಿಸೂಚಿಸಿದ ಘನ ತ್ಯಾಜ್ಯ ನಿರ್ವಹಣಾ ನಿಯಮಗಳು–2016ರ ಘನತ್ಯಾಜ್ಯೋತ್ಪಾದಕರು ಮತ್ತು ನಿರ್ಧಿಷ್ಟ ಪಡಿಸಿದ ನೂತನ ನಿರ್ಮಾಣಗಳನ್ನು ಕೈಗೊಳ್ಳುವವರು ಕೆಲವು ಇದು ಬೃಹತ್ ಘನತ್ಯಾಜ್ಯ ನಿರ್ವಹಣಾ ಕರ್ತವ್ಯಗಳನ್ನು ತಾವೇ ನಿರ್ವಹಿಸಬೇಕೆಂದು ಕಡ್ಡಾಯಪಡಿಸುತ್ತದೆ.**

ಯಾವುದೇ ನಿಯಮದಲ್ಲಿ/ ಉಪಬಂಧದಲ್ಲಿ ಏನೇ ಒಳಗೊಂಡಿದ್ದಾಗೂ ಸಹ ರಾಯಚೂರು ಮಹಾನಗರ ಪಾಲಿಕೆಯು ದಿನವೊಂದಕ್ಕೆ 100 ಕೆ.ಜಿ ಅಥವಾ ಅದಕ್ಕೂ ಹೆಚ್ಚಿನ ಘನತ್ಯಾಜ್ಯವನ್ನು ಉತ್ಪಾದಿಸುವಂತಹ ಉತ್ಪಾದಕರುಗಳು (ಎಲ್ಲಾ ತ್ಯಾಜ್ಯ ಮೂಲಗಳಿಂದ) ಅಥವಾ 5000 ಚದರ ಮೀಟರುಗಳು ಅಥವಾ ಅದಕ್ಕೂ ಹೆಚ್ಚಿನ ಪ್ರದೇಶವನ್ನು ಹೊಂದಿರುವಂತಿಹ ರಕ್ಷಿತ (ಗೇಟೆಡ್) ಸಮುದಾಯಗಳು, ಕಾರ್ಪೊರೇಟ್ ಆವರಣಗಳು, ತಂತ್ರಜ್ಞಾನ ಪಾರ್ಕ್‌ಗಳು ಮತ್ತು ಸಂಸ್ಥೆಗಳೆಂದು ಪರಿಭಾಷಿಸಲಾದ ಎಲ್ಲಾ ಬೃಹತ್ ತ್ಯಾಜ್ಯೋತ್ಪಾದಕರು ಘನ ತ್ಯಾಜ್ಯ ನಿರ್ವಹಣಾ ನಿಯಮಗಳು–2016 ಮತ್ತು ಅದರನ್ವಯ ರಾಯಚೂರು ಮಹಾನಗರ ಪಾಲಿಕೆಯು ಅಧಿಸೂಚಿಸಿದ ಉಪವಿಧಿಗಳ ಉಪಬಂಧಗಳ ಅನ್ವಯ ಜೈವಿಕವಾಗಿ ಕೊಳೆಯಬಹುದಾದ ತ್ಯಾಜ್ಯಗಳನ್ನು ಮೂಲದಲ್ಲಿಯೇ ಮತ್ತು ಆವರಣದೊಳಗೆ ಸಂಸ್ಕರಿಸುವ ಮತ್ತು ನಿರ್ವಹಿಸುವ ಮೂಲಕ 3 (ಮೂರು) ಪ್ರವರ್ಗ/ ರೀತಿಯಲ್ಲಿ (ಕೊಳೆಯಬಹುದಾದ ಜೈವಿಕ ತ್ಯಾಜ್ಯಗಳು, ಕೊಳೆಯಲಾರದಂತಹ ಜೈವಿಕರಹಿತ ತ್ಯಾಜ್ಯಗಳು ಮತ್ತು ಗ್ರಹೋತ್ಪಾದಕ ಹಾನಿಕಾರಕ ತ್ಯಾಜ್ಯಗಳು) ಘನತ್ಯಾಜ್ಯವನ್ನು ಬೇರ್ಪಡಿಸುವುದನ್ನು ಒಳಗೊಂಡಿದೆ. ಈ ನೋಟೀಸು ಜಾರಿಯಾದ ದಿನಾಂಕದಂದು 60 ದಿನಗಳಿಗಿಂತ ಹೆಚ್ಚಾಗದ ಅವಧಿಯೊಳಗೆ ಅನುಷ್ಠಾನಗೊಳಿಸಬೇಕೆಂದು ಈ ಮೂಲಕ ನಿರ್ದೇಶಿಸುತ್ತದೆ. ಸವಿವರವಾದ ಸೂಚನೆಗಳು, ಉಪವಿಧಿಗಳಲ್ಲಿ ಲಭ್ಯವಿರುತ್ತದೆ. ಪರಿಭಾಷಯಡಿಯಲ್ಲಿ ಬರುವಂತಹ ಎಲ್ಲಾ ತ್ಯಾಜ್ಯೋತ್ಪಾದಕರೂ ಸಹ ಅವರುಗಳು ನೋಟೀಸನ್ನು ಜಾರಿ ಮಾಡಿದ ಅವಧಿಯೊಳಗೆ, ಪ್ರತಿ ದಿನವೊಂದಕ್ಕೆ ಅವರುಗಳು ತಮ್ಮ ಆವರಣದಿಂದ 100 ಕೆಜಿಗಿಂತ ಕಡಿಮೆ ತ್ಯಾಜ್ಯವನ್ನು ಉತ್ಪಾದಿಸುತ್ತಿರುವರೆಂದು ಸ್ವಯಂ ಘೋಷಣೆಯನ್ನು ಸಲ್ಲಿಸದ ಹೊರತು ಅವರನ್ನು ಅದೇ ರೀತಿಯಲ್ಲಿಯೇ ಬೃಹತ್ ತ್ಯಾಜ್ಯೋತ್ಪಾದಕರ ವರ್ಗೀಕರಿಸಲಾಗುವುದು.

ಅಂತಹ ಸ್ವಯಂ ಘೋಷಣೆಯು ಪರಿಶೀಲನೆಗೆ ಒಳಪಡತಕ್ಕದು, ಮತ್ತು ಒಂದು ವೇಳೆ ಅದು ಸುಳ್ಳೆಂದು ಕಂಡುಬಂದರ ಸ್ವಯಂ ಘೋಷಣೆಯನ್ನು ಪರಿಶೀಲನೆ ಮಾಡುವ ಸಲುವಾಗಿ ನೋಟೀಸನ್ನು ಜಾರಿಗೊಳಿಸಿದ 20 ದಿವಸಗಳೊಳಗೆ ಅನ್ವಯವಾಗುವಂತಹ ರಾಯಚೂರು ಮಹಾನಗರ ಪಾಲಿಕೆಗೆ ಸಲ್ಲಿಸತಕ್ಕದ್ದು.

## ಹಂಪನಗೌಡರಿಗೆ ಸಚಿವ ಸ್ಥಾನ ಸಿಗಲೆಂದು ಅಭಿಮಾನಿ ಬಳಗದಿಂದ ಪೂಜೆ

**ನೈಜ್ಯ ದೆಸೆ ನ್ಯೂಸ್**

**ಸಿಂಧನೂರು: ರಾಗಲಪರ್ವಿ ಜಿಲ್ಲಾ ಪಂಚಾಯತಿ ಕ್ಷೇತ್ರದ ಅಭಿಮಾನಿ ಬಳಗ ಹಾಗೂ ಕಾಂಗ್ರೆಸ್ ಕಾರ್ಯಕರ್ತರಿಂದ ಜೂ.9 ಮಂಗಳವಾರದಂದು ಪಾದಯಾತ್ರೆ ಮೂಲಕ ತೆರಳಿ ಗಾಳಿ ದುರಗಮ್ಮ ದೇವಿಗೆ ವಿಶೇಷ ಪೂಜೆ ಸಲ್ಲಿಸಿದರು.**




ರಾಗಲಪರ್ವಿ ಜಿಲ್ಲಾ ಪಂಚಾಯತಿ ಕ್ಷೇತ್ರದಲ್ಲಿರುವ ಹಂಪನಗೌಡ ಬಾದರ್ಲಿಯವರ ಅಭಿಮಾನಿಗಳು ಮತ್ತು ಕಾಂಗ್ರೆಸ್ ಕಾರ್ಯಕರ್ತರೆಲ್ಲರೂ ಸೇರಿ ರಾಯಚೂರು ರಸ್ತೆಯಲ್ಲಿರುವ ಗಾಳಿ ದುರಗಮ್ಮ ದೇವಸ್ಥಾನದವರೆಗೂ ಪಾದಯಾತ್ರೆ ನಡೆಸಿ, ಶಾಸಕ ಹಂಪನಗೌಡ ಬಾದರ್ಲಿಯವರಿಗೆ ಸಚಿವ ಸ್ಥಾನ ಲಭಿಸಲಿ ಎಂದು ವಿಶೇಷ ಪೂಜೆ ಸಲ್ಲಿಸಿದರು.

ಹಂಪನಗೌಡ ಬಾದರ್ಲಿಯವರು ಜಿಲ್ಲೆಯ ಹಿರಿಯ ಶಾಸಕರಾಗಿದ್ದು, ಶಿಕ್ಷಣ ಹಾಗೂ ನೀರಾವರಿ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸಿದ್ದಾರೆ. ಸಿಂಧನೂರು ತಾಲೂಕಿನ ಅಂಬಾಮಠದ ಅಂಬಾದೇವಿ ದೇವಸ್ಥಾನದ ಹೊಸ ಕಟ್ಟಡ ಹಾಗೂ ಕ್ಷೇತ್ರದ ಅಭಿವೃದ್ಧಿಗೆ ಸರ್ಕಾರದಿಂದ ವಿಶೇಷ ಅನುದಾನವನ್ನು ತರುವ ಮೂಲಕ ಶಕ್ತಿ ಪೀಠದ ಅಂಬಾಮಠದ ಅಭಿವೃದ್ಧಿಗೆ ಶ್ರಮಿಸುತ್ತಿದ್ದಾರೆ. ಇಂತಹವರಿಗೆ ಸಚಿವ ಸ್ಥಾನವನ್ನು ನೀಡಿದಲ್ಲಿ ತಾಲೂಕು ಹಾಗೂ ಜಿಲ್ಲೆ ಅಭಿವೃದ್ಧಿಯಾಗುತ್ತದೆ. ಕಾರಣ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು. ಈಗಿನ ನೂತನ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಅವರು ಹಾಗೂ ಅಧ್ಯಕ್ಷರಾದ ಬಿ.ಕೆ.ಹರಿಪ್ರಸಾದರವರು ಶಾಸಕ ಹಂಪನಗೌಡರಿಗೆ ಸಚಿವ ಸ್ಥಾನ ನೀಡಲು ಮನಸ್ಸು ಮಾಡಬೇಕೆಂದು ಅವರಲ್ಲಿ ಮನವಿ ಮಾಡುತ್ತೇವೆ ಎಂದರು.

ಈ ಸಂದರ್ಭದಲ್ಲಿ: ಹನುಮರೆಡ್ಡೆಪ್ಪಗೌಡ ರಾಮತ್ನಾಳ್, ದೊಡ್ಡಅಮರಯ್ಯ ವಲಕಮದಿನ್ನಿ, ನಾಗರಾಜ ರಾಮತ್ನಾಳ್, ರಾಮಣ್ಣ ಗೊನವಾರ, ಅರುಣಕುಮಾರ ನಾಯಕ ಯಾಪಲಪರ್ವಿ, ದುರಗಪ್ಪ ದಿದ್ದಿಗಿ, ಸಾಲುಮನ್ ವಕೀಲರು, ಸೂಗನಗೌಡ ಪೊಲೀಸ್ ಪಾಟೀಲ್ ಬನ್ನಿಗನೂರು, ಯಾಪಲಪರ್ವಿ ಗ್ರಾಮದ ಶರಣಪ್ಪ, ಚಂದ್ರಶೇಖರ, ನಾಗರೆಡ್ಡಿ, ಸಾಬಣ್ಣ, ಹಾಗೂ ಬಸವರಾಜ ಪುಲದಿನ್ನಿ ಸೇರಿದಂತೆ ಅನೇಕರಿದ್ದರು.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

## ಉಜ್ವಲ ಕುಮಾರ್ ಘೋಷ್ ಅವರಿಂದ ಎರಡನೇ ದಿನವು ಮುಂದುವರಿದ ಭೇಟಿ, ಪರಿಶೀಲನೆ

**ನೈಜ್ಯ ದೆಸೆ ನ್ಯೂಸ್**

**ರಾಯಚೂರು ಜೂನ್ 09 (ಕರ್ನಾಟಕ ವಾರ್ತೆ): ರಾಯಚೂರು ಜಿಲ್ಲೆಯಲ್ಲಿ ಪ್ರವಾಸದಲ್ಲಿರುವ ಭಾರತ ಸರ್ಕಾರದ ವಾಣಿಜ್ಯ ಇಲಾಖೆಯ ಜಂಟಿ ಕಾರ್ಯದರ್ಶಿಗಳು ಹಾಗೂ ಮಹತ್ವಾಕಾಂಕ್ಷಿ ಜಿಲ್ಲೆಯ ರಾಯಚೂರಿನ ಕೇಂದ್ರ ಪ್ರಭಾರ ಅಧಿಕಾರಿಗಳಾದ ಉಜ್ವಲ ಕುಮಾರ್ ಘೋಷ್ ಅವರು ಜೂನ್ 09ರ ಮಂಗಳವಾರ ದಂದು ರಾಯಚೂರಿನ ವಿವಿಧ ಕಡೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.**



ಯರಮರಸ್ ಸರ್ಕ್ಯೂಟ್ ಹೌಸ್‌ನಿಂದ ಬೆಳಿಗ್ಗೆ 08ಗಂಟೆಗೆ ನೇರವಾಗಿ ಮೊದಲಿಗೆ ರಾಯಚೂರು ನಗರದ ಓಫೆಕ್ ಆಸ್ಪತ್ರೆಗೆ ಭೇಟಿ ನೀಡಿ, ಆಸ್ಪತ್ರೆಯಲ್ಲಿನ ಸೌಕರ್ಯಗಳ ಬಗ್ಗೆ ಖುದ್ದು ಪರಿಶೀಲಿಸಿ ಮಾಹಿತಿ ಪಡೆದುಕೊಂಡರು. ಆಸ್ಪತ್ರೆಗೆ ಬರುವ ಸಾರ್ವಜನಿಕರಿಗೆ ಉತ್ತಮ ಗುಣಮಟ್ಟದದಿಂದ ಚಿಕಿತ್ಸೆ ನೀಡಬೇಕು. ಸರ್ಕಾರದ ಸೌಲಭ್ಯಗಳ ಬಗ್ಗೆ ಸಾರ್ವಜನಿಕರಿಗೆ ಸರಿಯಾದ ಮಾಹಿತಿಯನ್ನು ನೀಡಬೇಕು. ಹಾಗೂ ಚಿಕಿತ್ಸೆಗಳ ಮಾಹಿತಿಯನ್ನು ನಾಮಫಲಕದಲ್ಲಿ ಪ್ರದರ್ಶನ ಮಾಡಬೇಕು. ಅಲ್ಲದೆ ಆಸ್ಪತ್ರೆಗೆ ಒಳಗೆ ಹಾಗೂ ಹೊರಗಡೆ ಸ್ವಚ್ಛತೆಯನ್ನು ಕಾಪಾಡಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು. ನಂತರ ಆಸ್ಪತ್ರೆಯ ವಿವಿಧ ವಿಭಾಗದ ವಾರ್ಡ್‌ಗಳಿಗೆ ಭೇಟಿ ನೀಡಿ, ರೋಗಿಗಳ ಅಹವಾಲು ಆಲಿಸಿದರು. ನಂತರ ಓಫೆಕ್ ಆಸ್ಪತ್ರೆಯಲ್ಲಿ ನೀತಿ ಆಯೋಗದ ವತಿಯಿಂದ ಆರಂಭಿಸಿರುವ ಟ್ರಾಮಾ ಸೆಂಟರ್‌ಗೆ ಭೇಟಿ ನೀಡಿ, ಟ್ರಾಮಾ ಸೆಂಟರ್ ಜಿಲ್ಲೆಯಲ್ಲಿ ಹೇಗೆ ನಡೆಯುತ್ತಿದೆ ಎಂದು ಅಧಿಕಾರಿಗಳನ್ನು ಕೇಳಿದರು. ಜಿಲ್ಲೆಯಲ್ಲಿ ಟ್ರಾಮಾ ಸೆಂಟರ್ ಆರಂಭದಿಂದ ಜಿಲ್ಲೆಗೆ ಅನುಕೂಲವಾಗಿದೆ. ಜಿಲ್ಲೆಯ ಜನರು ಬೇರೆಕಡೆಗೆ ಹೋಗುವುದು ತಪ್ಪಿದೆ. ಜನರಿಗೆ ಉತ್ತಮ ಚಿಕಿತ್ಸೆ ನೀಡಲಾಗುತ್ತದೆ ಎಂದು ಓಫೆಕ್ ಆಸ್ಪತ್ರೆಯ ಅಧಿಕಾರಿಗಳು ಮಹತ್ವಾಕಾಂಕ್ಷಿ ಜಿಲ್ಲೆಯ ರಾಯಚೂರಿನ ಕೇಂದ್ರ ಪ್ರಭಾರ ಅಧಿಕಾರಿಗಳಾದ ಉಜ್ವಲ ಕುಮಾರ್ ಘೋಷ್ ಅವರಿಗೆ ಮಾಹಿತಿ ನೀಡಿದರು.

ನಂತರ ಮನ್ಸಲಾಪುರಿನ ಘನತ್ಯಾಜ ನಿರ್ವಹಣೆ ಘಟಕ್ಕೆ ಭೇಟಿ ನೀಡಿ, ಘನತ್ಯಾಜವನ್ನು ಸರಿಯಾಗಿ ನಿರ್ವಹಣೆ ಮಾಡಬೇಕು. ಸುತ್ತಮುತ್ತಲಿನ ಜನರಿಗೆ ತೊಂದರೆಯಾಗದಂತೆ ನಿರ್ವಹಣೆ ಮಾಡಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ನಂತರ ರಾಯಚೂರಿನ ಐತಿಹಾಸಿಕ ಮಾವಿನ ಕೆರೆಯಲ್ಲಿ ನಡೆಯುತ್ತಿರುವ ಕಾಮಗಾರಿಯನ್ನು ಪರಿಶೀಲಿಸಿ, ಕೆರೆ ವೀಕ್ಷಣೆ ಮಾಡಿದರು. ನಂತರ ಜಿಲ್ಲಾ ಪಂಚಾಯತ ಆವರಣದಲ್ಲಿ ಸ್ವಸಹಾಯ ಗುಂಪಿನ ಮಹಿಳೆಯರಿಂದ ಸ್ಥಾಪಿಸಲಾಗಿರುವ ಅಕ್ಕ ಕೆಫೆಗೆ ಭೇಟಿ ನೀಡಿ, ಕೆಫೆಯಲ್ಲಿ ಕಾಫಿ ಸವಿದರು. ಅಕ್ಕ ಕೆಫೆ ಅಚ್ಚುಕಟ್ಟಾಗಿ ನಿರ್ವಹಣೆ ಮಾಡಲಾಗುತ್ತಿದೆ. ಇನ್ನೂ ಮುಂದೆ ಇನ್ನಷ್ಟು ಚೆನ್ನಾಗಿ ನಿರ್ವಹಣೆ ಮಾಡಿಕೊಂಡು ಹೋಗುವಂತೆ ಸ್ವಸಹಾಯ ಗುಂಪಿನ ಮಹಿಳೆಯರಿಗೆ ಸಲಹೆ ನೀಡಿದರು. ನಂತರ ಯರಮರಸ್ ಸರ್ಕ್ಯೂಟ್ ಹೌಸ್‌ನಲ್ಲಿ ಸರ್ಕಾರಿ ನೌಕರರ ಸಂಘದಿಂದ ಭಾರತ ಸರ್ಕಾರದ ವಾಣಿಜ್ಯ ಇಲಾಖೆಯ ಜಂಟಿ ಕಾರ್ಯದರ್ಶಿಗಳು ಹಾಗೂ ಮಹತ್ವಾಕಾಂಕ್ಷಿ ಜಿಲ್ಲೆಯ ರಾಯಚೂರಿನ ಕೇಂದ್ರ ಪ್ರಭಾರ ಅಧಿಕಾರಿಗಳಾದ ಉಜ್ವಲ ಕುಮಾರ್ ಘೋಷ್ ಅವರು ಸನ್ಮಾನಿಸಲಾಯಿತು.

ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ, ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತ ಜುಬಿನ್ ಮೊಹೊಪಾತ್ರ, ಜಿಲ್ಲಾ ಪಂಚಾಯತ ಮುಖ್ಯ ಯೋಜನಾ ನಿರ್ದೇಶಕ ಡಾ.ಟಿ.ರೋಣಿ, ಜಿಲ್ಲಾ ಪಂಚಾಯತ ಯೋಜನಾಧಿಕಾರಿ ಶರಣಬಸವರಾಜ್, ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಕೃಷ್ಣ, ರಿಮ್ಸ್ ಆಸ್ಪತ್ರೆಯ ನಿರ್ದೇಶಕ ಡಾ.ರಮೇಶ ಬಿ.ಕೆ., ಓಫೆಕ್ ಆಸ್ಪತ್ರೆಯ ವಿಶೇಷಾಧಿಕಾರಿ ಡಾ.ರಮೇಶ ಸಾಗರ್ ಸೇರಿದಂತೆ ಇತರರು ಇದ್ದರು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### ಆರ್ಕಿಟೆಕ್ಚರಲ್ ಡ್ರಾಫ್ಟ್ಸ್‌ಮನ್

ರಾಷ್ಟ್ರೀಯ ಕೌಶಲ್ಯ ಅರ್ಹತಾ ಚೌಕಟ್ಟು (NSQF ಮಟ್ಟ–5) ಅಡಿಯಲ್ಲಿ ಆರ್ಕಿಟೆಕ್ಚರಲ್ ಡ್ರಾಫ್ಟ್ಸ್‌ಮನ್ ಕೋರ್ಸ್ 2 ವರ್ಷಗಳ ವೃತ್ತಿಪರ ಕಾರ್ಯಕ್ರಮವಾಗಿದೆ. ಇದು ಆಧುನಿಕ ಅಂಆ ಮತ್ತು BIM ಸಾಫ್ಟ್‌ವೇರ್ ಬಳಸಿ ಕಟ್ಟಡ ವಿನ್ಯಾಸಗಳು, ವಾಸ್ತುಶಿಲ್ಪ ರೇಖಾಚಿತ್ರಗಳು ಮತ್ತು 3ಆ ಮಾದರಿಗಳನ್ನು ತಯಾರಿಸಲು ಮತ್ತು ಕರಡು ರಚಿಸಲು ವಿದ್ಯಾರ್ಥಿಗಳಿಗೆ ತರಬೇತಿ ನೀಡುತ್ತದೆ. ಪ್ರಮುಖ ಕೋರ್ಸ್ ವಿವರಗಳು ಅವಧಿ: 2 ವರ್ಷಗಳು (3,200 ಗಂಟೆಗಳು, ಆನ್–ದಿ–ಜಾಬ್ ತರಬೇತಿ/ಗುಂಪು ಯೋಜನೆಗಳು ಸೇರಿದಂತೆ). ಪ್ರವೇಶ ಅರ್ಹತೆ: ವಿಜ್ಞಾನ ಮತ್ತು ಗಣಿತ (ಅಥವಾ ತತ್ಸಮಾನ) ದೊಂದಿಗೆ 10 ನೇ ತರಗತಿಯಲ್ಲಿ ಉತ್ತೀರ್ಣ. ಕನಿಷ್ಠ ವಯಸ್ಸು: 14 ವರ್ಷಗಳು. ಓಖಕಿಈ ಮಟ್ಟ: ಮಟ್ಟ–5. ಪ್ರಮಾಣೀಕರಣ ಸಂಸ್ಥೆ: ಕೌಶಲ್ಯ ಅಭಿವೃದ್ಧಿ ಮತ್ತು ಉದ್ಯಮಶೀಲತೆ ಸಚಿವಾಲಯದ ಅಡಿಯಲ್ಲಿ ತರಬೇತಿ ನಿರ್ದೇಶನಾಲಯ (DGT), ಇದನ್ನು ಸಾಮಾನ್ಯವಾಗಿ ಕೈಗಾರಿಕಾ ತರಬೇತಿ ಸಂಸ್ಥೆಗಳು (ITIs) ಮೂಲಕ ನೀಡಲಾಗುತ್ತದೆ. ಪ್ರಮುಖ ಪಠ್ಯಕ್ರಮ ಪಠ್ಯಕ್ರಮವು ನಾಲ್ಕು ಸೆಮಿಸ್ಟರ್‌ಗಳಲ್ಲಿ ಹಸ್ತಚಾಲಿತ ಚಿತ್ರಕಲೆ ಮತ್ತು ಉದ್ಯಮ–ಪ್ರಮಾಣಿತ ಡಿಜಿಟಲ್ ಪರಿಕರಗಳನ್ನು ಸಂಯೋಜಿಸುತ್ತದೆ: ವರ್ಷ 1: ತಾಂತ್ರಿಕ ಚಿತ್ರಕಲೆಯ ಮೂಲಗಳು, ಫ್ರೀ–ಹ್ಯಾಂಡ್ ಸ್ಕೆಚಿಂಗ್, ಆರ್ಥೋಗ್ರಾಫಿಕ್ ಪ್ರೊಜೆಕ್ಷನ್‌ಗಳು, ಜ್ಯಾಮಿತೀಯ ಚಿತ್ರಕಲೆ, ಫ್ರೀಹ್ಯಾಂಡ್ ಸ್ಕೆಚಿಂಗ್ ಮತ್ತು ವಾಸ್ತುಶಿಲ್ಪದ ಚಿಹ್ನೆಗಳು. ತರಬೇತಿದಾರರಿಗೆ ಕಂಪ್ಯೂಟರ್–ಸಹಾಯದ ವಿನ್ಯಾಸ (CAD) ಮತ್ತು ಮೂಲ ವಸತಿ ಕಟ್ಟಡ ವಿನ್ಯಾಸವನ್ನು ಪರಿಚಯಿಸಲಾಗುತ್ತದೆ. ವರ್ಷ 2: ಸುಧಾರಿತ ವಾಸ್ತುಶಿಲ್ಪದ ಕರಡು ರಚನೆ, 3ಆ ಮಾಡೆಲಿಂಗ್, ರೆವಿಟ್‌ನಂತಹ ಸಾಫ್ಟ್‌ವೇರ್ ಬಳಸಿ ಕಟ್ಟಡ ಮಾಹಿತಿ ಮಾಡೆಲಿಂಗ್ (BIM), ಫೋಟೋಶಾಪ್‌ನಲ್ಲಿ ರೆಂಡರಿಂಗ್ ಮತ್ತು ಸುಸ್ಥಿರ/ಹಸಿರು ವಾಸ್ತುಶಿಲ್ಪದ ತತ್ವಗಳು. ತರಬೇತಿ–ದಾರರು ಅಪಾರ್ಟ್‌ಮೆಂಟ್‌ಗಳು, ಫಾರ್ಮ್‌ಹೌಸ್‌ಗಳು ಮತ್ತು ಸಣ್ಣ ಕಚೇರಿಗಳಿಗೆ ಸಂಪೂರ್ಣ ಯೋಜನಾ ವರದಿಗಳಲ್ಲಿಯೂ ಕೆಲಸ ಮಾಡುತ್ತಾರೆ. ವೃತ್ತಿ ಮತ್ತು ಉದ್ಯೋಗದ ಪಾತ್ರಗಳು ಪೂರ್ಣಗೊಂಡ ನಂತರ, ಪದವೀಧರರನ್ನು ನಿರ್ಮಾಣ ಮತ್ತು ರಿಯಲ್ ಎಸ್ಟೇಟ್ ವಲಯಗಳಲ್ಲಿನ ವೃತ್ತಿಜೀವನಕ್ಕೆ ಸಿದ್ಧಪಡಿಸಲಾಗುತ್ತದೆ: ವಾಸ್ತುಶಿಲ್ಪದ ಕರಡುಗಾರ / ಸಹಾಯಕ ವಾಸ್ತುಶಿಲ್ಪಿ ಸಿವಿಲ್ ಡ್ರಾಫ್ಟ್‌ಮ್ಯಾನ್ ಅಂಆ ತಂತ್ರಜ್ಞ/ BIM ಮಾಡೆಲರ್ ಅಂದಾಜುಗಾರ ವಿದ್ಯಾರ್ಹತೆ ದ್ವಿತೀಯ ಪಿಯುಸಿ

## ಯರಮರಸ್ ಗ್ರಾಮದ ಸುರೇಶ ಕಾಣೆ: ಪತ್ತೆಗೆ ಗ್ರಾಮೀಣ ಪೊಲೀಸರ ಮನವಿ

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು ಜೂನ್ 09 (ಕರ್ನಾಟಕ ವಾರ್ತೆ): ರಾಯಚೂರು ಗ್ರಾಮೀಣ ಪೊಲೀಸ್ ಠಾಣೆಯ ಯರಮರಸ್ ಗ್ರಾಮದ ಸುರೇಶ ತಂದೆ ಈರಪ್ಪ ಗೌಡ (32) ಎಂಬ ವ್ಯಕ್ತಿಯು ಜೂನ್ 02ರ ಬೆಳಿಗ್ಗೆ 8ಗಂಟೆಗೆ ಸುಮಾರಿಗೆ ದೇವಸ್ಥಾನಕ್ಕೆ ಹೋಗಿ ಬರುತ್ತೇನೆಂದು ತನ್ನ ಹೆಂಡತಿಗೆ ಹೇಳಿ, ದ್ವಿಚಕ್ರ ವಾಹನ ತೆಗೆದುಕೊಂಡು ಹೋದವನ್ನು ಮರಳಿ ಮನೆಗೆ ಬಾರದೆ ಕಾಣೆಯಾಗಿದ್ದು, ಈ ಕುರಿತು ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಗುನ್ನೆ ನಂ: 100/2026 ಕಲಂ ಮನುಷ್ಯ ಕಾಣೆ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಳ್ಳಲಾಗಿದೆ.**



ನಂತರ ರಾಯಚೂರಿನ ಸಂಕಲ್ಪ ಆಸ್ಪತ್ರೆಯ ಆವರಣದಲ್ಲಿ ತನ್ನ ದ್ವಿಚಕ್ರ ವಾಹನವನ್ನು ಬಿಟ್ಟು ಹೋಗಿದ್ದಾನೆ. ಅಲ್ಲಲ್ಲಿ ಹುಡುಕಾಡಿದರೂ ಇಲ್ಲಿಯವರೆಗೆ ಸಿಗದೇ ಇದ್ದುದರಿಂದ ಕಾಣೆಯಾದ ಕುರಿತು ಈರಪ್ಪ ಗೌಡ ಅವರು ತಡವಾಗಿ ಠಾಣೆಗೆ ಬಂದು ಗಣಕೀಕೃತ ದೂರು ನೀಡಿದ್ದಾರೆ.

ಕಾಣೆಯಾದ ಮನುಷ್ಯನ ಚಹರೆ: ವಯಸ್ಸು 32 ವರ್ಷ, 5.6 ಅಡಿ ಎತ್ತರ, ಉದ್ಯೋಗ ಫೈನಾನ್ಸ್ /ಒಕ್ಕಲುತನ, ಸಾಧಾರಣ ಮೈಕಟ್ಟು, ಗೋದಿ ಮೈ ಬಣ್ಣ, ಚಪ್ಪಟೆ ಮುಖ, ಉದ್ದ ಮೂಗು, ಕಪ್ಪು ಕೂದಲು ಹೊಂದಿದ್ದು, ಬಿಳಿ ಬಣ್ಣದ ಅಂಗಿ, ನೀಲಿ ಬಣ್ಣದ ಜೀನ್ಸ್ ಫ್ಯಾಂಟ್ ಧರಿಸಿದ್ದಾನೆ. ಕನ್ನಡ, ತೆಲುಗು, ಹಿಂದಿ ಭಾಷೆ ಮಾತನಾಡುತ್ತಾನೆ. ಈ ಮೇಲಿನ ಚಹರೆಯುಳ್ಳ ಮನುಷ್ಯ ಬಗ್ಗೆ ಮಾಹಿತಿ ಸಿಕ್ಕಲ್ಲಿ ಪಿ.ಎಸ್.ಐ ರಾಯಚೂರು ಗ್ರಾಮೀಣ ಪೊಲೀಸ್ ಠಾಣೆ ಮೊಬೈಲ್ ಸಂಖ್ಯೆ: 9480803850, ಸಿಪಿಐ ಗ್ರಾಮೀಣ ವೃತ್ತ ರಾಯಚೂರು ಮೊಬೈಲ್ ಸಂಖ್ಯೆ: 9480803832, ಡಿಎಸ್ಪಿ ರಾಯಚೂರು ಮೊಬೈಲ್ ಸಂಖ್ಯೆ: 9480803820, ರಾಯಚೂರು ಕಂಟ್ರೋಲ್ ರೂಮ್ ದೂರವಾಣಿ ಸಂಖ್ಯೆ: 08532–235635ಗೆ ಸಂಪರ್ಕ ಮಾಡಬಹುದಾಗಿದೆ ಎಂದು ರಾಯಚೂರು ಗ್ರಾಮೀಣ ಪೊಲೀಸ್ ಠಾಣೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಿಪ್ಲೋಮಾ ಕೋರ್ಸ್ ಪ್ರವೇಶಕ್ಕೆ ಆಫ್‌ಲೈನ್ ಮೂಲಕ ಅರ್ಜಿ ಆಹ್ವಾನ

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು ಜೂನ್ 09 (ಕರ್ನಾಟಕ ವಾರ್ತೆ): ರಾಯಚೂರಿನ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ 2026–27ನೇ ಸಾಲಿಗೆ 02 ವರ್ಷಗಳ ಐ.ಟಿ.ಐ, ದ್ವಿತೀಯ ಪಿ.ಯು.ಸಿ ವಿಜ್ಞಾನ ಅಥವಾ ದ್ವಿತೀಯ ಪಿ.ಯು.ಸಿ ತಾಂತ್ರಿಕ ವಿಷಯಗಳು ಉತ್ತೀರ್ಣರಾಗಿರುವ ಅರ್ಹ ಅಭ್ಯರ್ಥಿಗಳಿಂದ ಲ್ಯಾಟರಲ್ ಎಂಟ್ರಿ ಸ್ಕೀಂ ಮುಖಾಂತರ 2ನೇ ವರ್ಷ / 3ನೇ ಸೆಮಿಸ್ಟರ್ ಡಿಪ್ಲೋಮಾ ಕೋರ್ಸ್‌ಗಳಿಗೆ ಆಫ್‌ಲೈನ್ ಮೂಲಕ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ.**

ಆಸಕ್ತರು ಇಲಾಖೆಯ ಅಧಿಕೃತ ವೆಬ್ ಸೈಟ್‌ನಲ್ಲಿ ಅರ್ಜಿಯನ್ನು ಡೌನ್‌ಲೋಡ್ ಮಾಡಿಕೊಂಡು ಭರ್ತಿ ಮಾಡಿದ ಅರ್ಜಿ ಮತ್ತ ಆದ್ಯತಾ ಪಟ್ಟಿಯನ್ನು ಪ್ರವೇಶ ಬಯಸುವ ಸಂಸ್ಥೆಯ ಪ್ರಾಚಾರ್ಯರಿಗೆ ನಿಗದಿತ ದಿನಾಂಕ ಜೂನ್ 20ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.



ಅರ್ಹ ಅಭ್ಯರ್ಥಿಗಳ ಮೆರಿಟ್ ಪಟ್ಟಿ ಜೂನ್ 23ರಂದು ಪ್ರಕಟಣೆ ಮಾಡಲಾಗುತ್ತದೆ. ಮೆರಿಟ್ ಪಟ್ಟಿ ಸಂಬಂಧಿಸಿದಂತೆ ಪರೊಷ್ಕರಣೆ/ತಿದ್ದಪಡೆ ಮನವಿಗೆ ಸಲ್ಲಿಸಲು ಜೂನ್ 25 ಅಂತಿಮ ದಿನಾಂಕವಾಗಿದೆ. ಜೂನ್ 30 ಅಚಿತಿಮ ಮೆರಟ್ ಪಟ್ಟಿ ಬಿಡುಗಡೆ ಮಾಡಲಾಗುವುದು. ಜುಲೈ 01ರಿಂದ ಜುಲೈ 04ರವರೆಗೆ ಸೀಟು ಆಯ್ಕೆ ಮಾಡಿಕೊಂಡ ಅಭ್ಯರ್ಥಿಗಳು ಮೂಲ ದಾಖಲೆಗಳು ಹಾಗೂ ನಿಗದಿತ ಶುಲ್ಕದೊಂದಿಗೆ ಪ್ರವೇಶ ಪಡೆಯಬಹುದಾಗಿದೆ.

ಜುಲೈ 06ರಿಂದ 10ರವರೆಗೆ ಸೀಟುಗಳು ಭರ್ತಿಯಾಗದೇ ಉಳಿಕೆಯಾದಲ್ಲಿ ಪ್ರಾಂಶುಪಾಲರ ಹಂತದಲ್ಲಿಯೇ ಆಫ್‌ಲೈನ್ ಮೂಲಕ ಸೀಟು ಹಂಚಿಕೆ ಮಾಡಲು ಪ್ರಾರಂಭ ಮತ್ತು ಅಂತಿಮ ದಿನಾಂಕವಾಗಿದೆ. ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ ವಿಳಾಸ: dtek.karnataka.gov.in or dte-tech.karnataka.gov.in / kartechni-ಛಿಚಿಟ ನಲ್ಲಿ ವೀಕ್ಷಣೆ ಮಾಡಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಚೇರಿ ಸಮಯದಲ್ಲಿ ಸಂಸ್ಥೆಯ ಪ್ರಾಂಶುಪಾಲರನ್ನು ಸಂಪರ್ಕಿಸಬಹುದಾಗಿದೆ ಎಂದು ರಾಯಚೂರು ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾನ್ವಿಯಲ್ಲಿ ಗೃಹ ಬಳಕೆ ಗ್ಯಾಸ್ ದುರ್ಬಳಕೆ ವಿರುದ್ಧ ತಹಶೀಲ್ದಾರ್ ದಾಳಿ

## ಹೋಟೆಲ್, ಡಾಬಾಗಳಲ್ಲಿ ಬಳಕೆಯಾಗುತ್ತಿದ್ದ 15 ಅಡುಗೆ ಅನಿಲ ಸಿಲೆಂಡರ್ ವಶಕ್ಕೆ

❑ ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಪಟ್ಟಣದಲ್ಲಿ ಮಂಗಳವಾರ ಬೆಳಿಗ್ಗೆ ತಹಶೀಲ್ದಾರ್ ಭೀಮರಾಯ ಬಿ. ರಾಮಸಮುದ್ರ ಅವರು ಶ್ರೀನಿಧಿ ಭಾರತ ಗ್ಯಾಸ್ ಏಜೆನ್ಸಿಯ ಅಡುಗೆ ಅನಿಲ ಸಿಲೆಂಡರ್ ಪೂರೈಕೆ ಗೋಡೌನ್‌ಗೆ ಭೇಟಿ ನೀಡಿ ಗೃಹ ಬಳಕೆ ಹಾಗೂ ವಾಣಿಜ್ಯ ಬಳಕೆಯ ಸಿಲೆಂಡರ್‌ಗಳ ಪರಿಶೀಲನೆ ನಡೆಸಿದರು.**

ಈ ವೇಳೆ ಮಾತನಾಡಿದ ಅವರು,



ಪಟ್ಟಣದ ಅನೇಕ ಹೋಟೆಲ್, ಡಾಬಾ ಹಾಗೂ ಟೀ ಅಂಗಡಿಗಳಲ್ಲಿ ನಿಯಮಾನುಸಾರ ವಾಣಿಜ್ಯ ಅನಿಲ ಸಿಲೆಂಡರ್ ಬಳಸದೇ ಸಾರ್ವಜನಿಕ–ರಿಗೆ ಪೂರೈಸುವ ಗೃಹ ಬಳಕೆ ಅಡುಗೆ ಅನಿಲ ಸಿಲೆಂಡರ್‌ಗಳನ್ನು ಬಳಸುತ್ತಿರುವುದ–ರಿಂದ ಜನಸಾಮಾನ್ಯರಿಗೆ ಅಡುಗೆ ಅನಿಲ ಕೊರತೆ ಉಂಟಾಗುತ್ತಿದೆ ಎಂದು ಹೇಳಿದರು. ಹೋಟೆಲ್ ಹಾಗೂ ಡಾಬಾಗಳಿಗೆ ಗೃಹ ಬಳಕೆ ಸಿಲೆಂಡರ್ ಪೂರೈಸಿದರೆ ಏಜೆನ್ಸಿಗಳ ವಿರುದ್ಧ ಅಗತ್ಯ ವಸ್ತುಗಳ ಕಾಯ್ದೆ ಅಡಿಯಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಬಳಿಕ ಪಟ್ಟಣದ ವಿವಿಧ ಹೋಟೆಲ್ ಹಾಗೂ ಡಾಬಾಗಳ ಮೇಲೆ ದಾಳಿ ನಡೆಸಿದ ಅಧಿಕಾರಿಗಳು, ವಾಣಿಜ್ಯ ಉದ್ದೇಶಕ್ಕೆ ಅಕ್ರಮವಾಗಿ ಬಳಸಲಾಗುತ್ತಿದ್ದ 15 ಗೃಹ ಬಳಕೆ ಅಡುಗೆ ಅನಿಲ ಸಿಲೆಂಡರ್‌ಗಳನ್ನು ವಶಕ್ಕೆ ಪಡೆದುಕೊಂಡರು. ತಾಲೂಕು ಆಹಾರ ನಿರೀಕ್ಷಕ ದೇವರಾಜ ಹಾಗೂ ಇಲಾಖೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಶ್ರೀ ಕನಕದಾಸ ಶಿಕ್ಷಣ ಮಹಾವಿದ್ಯಾಲಯದಲ್ಲಿ ಆಂತರಿಕ ಚಟುವಟಿಕೆಗಳ ಪರಿಶೀಲನೆ

❑ ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಶ್ರೀ ಕನಕದಾಸ ಶಿಕ್ಷಣ ಮಹಾವಿದ್ಯಾಲಯದಲ್ಲಿ ಪ್ರಥಮ ಹಾಗೂ ತೃತೀಯ ಸೆಮಿಸ್ಟರ್ ಪ್ರಶಿಕ್ಷಣಾರ್ಥಿಗಳ ಆಂತರಿಕ ಚಟುವಟಿಕೆಗಳ ಪರಿಶೀಲನಾ ಕಾರ್ಯಕ್ರಮ ಯಶಸ್ವಿಯಾಗಿ ನಡೆಯಿತು.**

ರಾಯಚೂರು ವಿಶ್ವವಿದ್ಯಾಲಯದ ಮಾರ್ಗಸೂಚಿಯಂತೆ ಆಯೋಜಿಸಲಾದ ಈ ಕಾರ್ಯಕ್ರಮದಲ್ಲಿ ಆಂತರಿಕ ಚಟುವಟಿಕೆಗಳ ಸಮನ್ವಯ ಸಮಿತಿಯ ಅಧ್ಯಕ್ಷರಾದ ಡಾ. ಮಂಜುನಾಥ್ ಪಾಟೀಲ್ ಹಾಗೂ ಸಮಿತಿಯ ಗೌರವಾನ್ವಿತ ಸದಸ್ಯರು ವಿದ್ಯಾರ್ಥಿ–ಶಿಕ್ಷಕರಿಂದ ಕೈಗೊಳ್ಳಲಾದ ವಿವಿಧ ಶೈಕ್ಷಣಿಕ ಮತ್ತು ಸಹಪಠ್ಯ ಚಟುವಟಿಕೆಗಳ ಪರಿಶೀಲನೆ ನಡೆಸಿದರು. ಈ ಸಂದರ್ಭದಲ್ಲಿ ಬೋಧನಾ




ಕಾರ್ಯಕ್ರಮಗಳು, ಪರಿಸರ ಜಾಗೃತಿ ಅಭಿಯಾನಗಳು, ಸಾಂಸ್ಕೃತಿಕ ಚಟುವಟಿಕೆಗಳು ಸೇರಿದಂತೆ ವಿವಿಧ ಕಾರ್ಯಕ್ರಮಗಳ ಕುರಿತು ಮಾಹಿತಿ ಪಡೆದು, ವಿದ್ಯಾರ್ಥಿಗಳು ಸಿದ್ಧಪಡಿಸಿದ್ದ ವರದಿಗಳು ಹಾಗೂ ದಾಖಲಾತಿಗಳನ್ನು ಸಮಿತಿಯ ಸದಸ್ಯರು ಅವಲೋಕಿಸಿದರು.

ಸಮಿತಿಯ ಸದಸ್ಯರಾದ ಡಾ. ರಮಕಾಂತ್, ಡಾ. ಜಗದೀಶ್ ಹಾಗೂ ಡಾ. ಆಲಿಸ್ ಜೋಸೆಫ್ ಅವರು ವಿದ್ಯಾರ್ಥಿಗಳ ಕಾರ್ಯಕ್ಷಮತೆ ಮತ್ತು ಸೃಜನಶೀಲತೆಯನ್ನು ಶ್ಲಾಘಿಸಿದರು. ಮುಂದಿನ ದಿನಗಳಲ್ಲಿ ಇನ್ನಷ್ಟು ಪರಿಣಾಮಕಾರಿ ಹಾಗೂ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತಹ ಕಾರ್ಯಕ್ರಮಗಳನ್ನು ಆಯೋಜಿಸುವಂತೆ ಸಲಹೆ ನೀಡಿದರು. ಶಿಕ್ಷಣ ಕ್ಷೇತ್ರದಲ್ಲಿ ಇಂತಹ ಪರಿಶೀಲನಾ ಸಮಿತಿಗಳು ವಿದ್ಯಾರ್ಥಿಗಳ ಗುಣಮಟ್ಟ ಮತ್ತು ವೃತ್ತಿಪರ ಕೌಶಲ್ಯವನ್ನು ಹೆಚ್ಚಿಸಲು ಸಹಕಾ–ರಿಯಾಗುತ್ತವೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಪ್ರಾಚಾರ್ಯರಾದ ಮಲ್ಲನಗೌಡ ಪಾಟೀಲ್, ಉಪನ್ಯಾಸಕರಾದ ಪಂಪಣ್ಣ ದೇಸಾಯಿ, ಅಯ್ಯಪ್ಪ ಕೃಷ್ಣ, ಗಾಂಧಿನಗರ ನಾಗರಾಜ್ ನಾಯಕ್, ಎನ್. ಎಚ್. ಬಾರ್ಕರ್, ವೀರೇಶ್ ಸೇರಿದಂತೆ ಇತರ ಬೋಧಕ ವೃಂದದವರು ಉಪಸ್ಥಿತ–ರಿದ್ದರು. ಅಲ್ಲದೆ ಪ್ರಥಮ ಹಾಗೂ ತೃತೀಯ ಸೆಮಿಸ್ಟರ್‌ನ ಎಲ್ಲಾ ಪ್ರಶಿಕ್ಷಣಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಘನತ್ಯಾಜ್ಯ ವಸ್ತು ನಿರ್ವಹಣೆ ಕಾಲ್ನಡಿಗೆ ಜಾಥಾಕ್ಕೆ ಪೌರಾಯುಕ್ತ ಪಾಂಡುರಂಗ ಇಟಗಿ ಹಸಿರು ನಿಶಾನೆ.

❑ ನೈಜ್ಯ ದೆಸೆ ನ್ಯೂಸ್

**ಘನತ್ಯಾಜ್ಯ ವಸ್ತು ನಿರ್ವಹಣೆ 2026 ಕಾಲ್ನಡಿಗೆ ಜಾಥಾ ಕಾರ್ಯಕ್ರಮಕ್ಕೆ ಪೌರಾಯುಕ್ತ ಪಾಂಡುರಂಗ ಇಟಗಿ ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿ ಮಹಾತ್ಮಗಾಂಧಿ ಪ್ರತಿಮೆಗೆ ಹೂವಿನಹಾರ ಹಾಕುವ ಮೂಲಕ ಸ್ವಚ್ಛತೆ ಘೋಷಣೆಯೊಂದಿಗೆ ಕಾಲ್ನಡಿಗೆ ಜಾಥಾ ನಡೆಸಿದರು.**

ಕನಕದಾಸ ವೃತ್ತದಲ್ಲಿ ಮಾನವ ಸರಪಳಿ ನಿರ್ಮಾಣ ಮಾಡುವ ಮೂಲಕ ಜಾಗೃತಿ ಮೂಡಿಸಲಾಯಿತು. ಪೌರಾಯುಕ್ತ ಪಾಂಡುರಂಗ ಇಟಗಿ ಸಸಿಗೆ ನೀರು ಹಾಕುವ ಮೂಲಕ ಕಾರ್ಯಕ್ರಮವನ್ನು






ಉದ್ಘಾಟಿಸಿ ಮಾತನಾಡಿದ ಅವರು, ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ಪ್ರತಿಯೊಬ್ಬ ನಾಗರೀಕರು ತಮ್ಮ ತಮ್ಮ ಮನೆಯ ತ್ಯಾಜ್ಯವನ್ನು ನಾಲ್ಕು ವಿಧಗಳಲ್ಲಿ ವಿಂಗಡಿಸಿ ನಗರಸಭೆ ವಾಹನಕ್ಕೆ ನೀಡಬೇಕು. ಮನೆಯಲ್ಲಿನ ಹಳೆಯ ಬಟ್ಟೆಗಳು, ಪುಸ್ತಕಗಳು, ಆಟಿಕೆಯ ಸಾಮಗ್ರಿಗಳು, ಪೆಂಟ್ ಡಬ್ಬಾ, ಬಲ್ಬ್ ಗಳನ್ನು ನಗರಸಭೆಯ ಆರ್.ಆರ್.ಆರ್ ಸೆಂಟರ್ ಹಾಗೂ ವಿಶೇಷ ಕಾಳಜಿ ಕೇಂದ್ರಗಳಿಗೆ ನೀಡಬೇಕು ಎಂದು ಮನವಿ ಮಾಡಿದರು.

ಆರ್.ಸಿ.ಪಾಟೀಲ್ ಮಾತನಾಡಿ, ಸಾರ್ವಜನಿಕರು ತಮ್ಮ ತ್ಯಾಜ್ಯವನ್ನು ಎಲ್ಲೆಂದರಲ್ಲಿ ಎಸೆಯದೆ ನಗರಸಭೆ ವಾಹನಕ್ಕೆ ವಿಂಗಡಿಸಿ ನೀಡಿ ಸ್ವಚ್ಛ ಸಿಂಧನೂರಿಗೆ ಎಲ್ಲರೂ ಕೈಜೋಡಿಸೋಣ ಹಾಗೂ ಪ್ಲಾಸ್ಟಿಕ್ ತ್ಯಜಿಸಿ, ಪರಿಸರ ಸ್ನೇಹಿ ಬಟ್ಟೆ ಚೀಲ ಬಳಸಿ ಎಂದು ತಿಳಿಸಿದರು. ಈ ಸಂದರ್ಭದಲ್ಲಿ: ನಗರಸಭೆ ಲೇಕ್ಕಾಧಿಕ್ಷಕ ಅಬ್ದುಲ್, ಸಿಇಒ ದುರ್ಗಪ್ಪ ಹಸಮಕಲ್, ಅಭಿಯಂತರಾದ ಚೇತನಕುಮಾರ, ಪ್ರವೀಣ, ಶಾಂತಕುಮಾರ, ಕಿರಣ, ಆರೋಗ್ಯ ನಿರೀಕ್ಷಕರಾದ ಕಿಶನ್, ಸನ್ ರೈಸ್ ಕಾಲೇಜಿನ ಪ್ರಾಚಾರ್ಯ ಲಾಜರ್ ಸಿರಿಲ್ , ಹನುಮಂತ, ವೆಂಕಟೇಶಕುಮಾರ, ಗೌಡರ್ ಲಕ್ಷ್ಮೀಪತಿ, ಲಿಂಗರಾಜ, ಸೇರಿದಂತೆ ಶಾಲಾ ಕಾಲೇಜಿನ ವಿದ್ಯಾರ್ಥಿಗಳು, ಕಮ್ಯೂನಿಟಿ ಮೋಬೋಲೈಸರ್ ಹಾಗೂ ಪೌರಕಾರ್ಮಿಕರು ಉಪಸ್ಥಿತರಿದ್ದರು.

# ಬುದ್ಧಿಮಾಂದ್ಯ ಮಕ್ಕಳಿಗೆ ಹಾಲು, ಹಣ್ಣು ಬ್ರೆಡ್ ವಿತರಣೆ

## ತಾಲೂಕು ಸಂಚಾಲಕ ಹೆಚ್.ಗುಂಡಪ್ಪ ನೇತೃತ್ವದಲ್ಲಿ ಪ್ರೋ.ಕೃಷ್ಣಪ್ಪ ಜಯಂತಿ ಆಚರಣೆ

❑ ನೈಜ್ಯ ದೆಸೆ ನ್ಯೂಸ್

**ಬಳ್ಳಾರಿ / ಕಂಪ್ಲಿ : ಪಟ್ಟಣದ ಕೊಟ್ಟಾಲ್ ರಸ್ತೆಯ ತಹಸಿಲ್ದಾರ್ ಕಚೇರಿಯ ಎದುರುಗಡೆಯಲ್ಲಿರುವ ಕಂಪಲಿರಾಯ ಬುದ್ಧಿಮಾಂದ್ಯ ವಿಶೇಷ ಮಕ್ಕಳ ಶಾಲೆಯಲ್ಲಿ ದಲಿತ ಸಂಘರ್ಷ ಸಮಿತಿಯ ಸಂಸ್ಥಾಪಕ ಪ್ರೊಫೆಸರ್ ಕೃಷ್ಣಪ್ಪ ಅವರ ಜನ್ಮದಿನದ ಅಂಗವಾಗಿ ತಾಲೂಕು ಸಂಚಾಲಕ ಹೆಚ್. ಗುಂಡಪ್ಪ ನೇತೃತ್ವದಲ್ಲಿ ಮಕ್ಕಳಿಗೆ ಹಾಲು, ಹಣ್ಣು, ಬ್ರೆಡ್ ಮಂಗಳವಾರ ವಿತರಿಸಲಾಯಿತು.**

ದಲಿತ ಸಂಘರ್ಷ ಸಮಿತಿ(ಪ್ರೋ. ಕೃಷ್ಣಪ್ಪ ಸ್ಥಾಪಿತ)ಯ ಕಂಪ್ಲಿ ತಾಲೂಕು ಘಟಕ ಸಂಚಾಲಕ ಹೆಚ್ಚು ಗುಂಡಪ್ಪ ಮಾತನಾಡಿ, ಕ್ರಿ.ಶ 1970 ರಲ್ಲಿ ಪ್ರೊಫೆಸರ್ ಕೃಷ್ಣಪ್ಪ ಅವರು ರಾಜ್ಯದಲ್ಲಿ ದಲಿತ, ಹಿಂದುಳಿದ ಮತ್ತು ಜನಸಾಮಾನ್ಯರಿಗೆ ಸರ್ಕಾರದ ಯೋಜನೆಗಳನ್ನು ನ್ಯಾಯಯುತವಾಗಿ ಒದಗಿಸಿಕೊಡುವ ನಿಟ್ಟಿನಲ್ಲಿ ದಲಿತ ಸಂಘರ್ಷ



ಸಮಿತಿ ಸಂಘಟನೆಯನ್ನು ಹುಟ್ಟು ಹಾಕಿದರು. ಈ ಸಂಘಟನೆಯ ಮೂಲಕ ಅನೇಕ ಬಡ ಮತ್ತು ಮಧ್ಯಮ ವರ್ಗದ ಜನತೆಗೆ ಹೋರಾಟದ ಮುಖೇನ ಸೌಲಭ್ಯಗಳನ್ನು ಕಲ್ಪಿಸಿಕೊಟ್ಟಿದ್ದಾರೆ. ಇವರ ನಿರಂತರ ಹೋರಾಟದಿಂದ ಸಂಘಟನೆಯ ದೊಡ್ಡ ಮಟ್ಟದಲ್ಲಿ ಬೆಳೆದಿದೆ. ಅವರ ಅಡಿಯಲ್ಲಿ ತಾಲೂಕು ಮಟ್ಟದಲ್ಲಿ ಜನಪರ ಸೇವೆ ಮಾಡಲಾಗುತ್ತಿದೆ. ಶಿಕ್ಷಣ, ಸಂಘಟನೆ, ಹೋರಾಟ ಎಂಬ ಮೂರು ಅಸ್ತ್ರಗಳೊಂದಿಗೆ ಸರ್ಕಾರದ ಮಟ್ಟದಲ್ಲಿ ಧ್ವನಿ ಎತ್ತಿ ಅನ್ಯಾಯದ ವಿರುದ್ಧ ಹೋರಾಡುವುದು ನಮ್ಮ ಕರ್ತವವಾಗಿದೆ. ಈ ನಿಟ್ಟಿನಲ್ಲಿ ಪ್ರತಿಯೊಬ್ಬ ಪದಾಧಿಕಾರಿಗಳ ಪರಿಶ್ರಮ ಅಗತ್ಯವಾಗಿದೆ. ಪ್ರೊಫೆಸರ್ ಕೃಷ್ಣಪ್ಪ ಅವರ ಜನ್ಮದಿನದ ಅಂಗವಾಗಿ ಕಂಪ್ಲಿ ನಗರದ ಅಂಬೇಡ್ಕರ್ ವೃತ್ತದಲ್ಲಿ ಭಾವಚಿತ್ರಕ್ಕೆ ವಿಶೇಷ ಪೂಜೆ ಮತ್ತು ಪುಷ್ಪಾರ್ಚನೆ ಸಲ್ಲಿಸಿ, ಕೊಟ್ಟಾಲ್ ರಸ್ತೆಯ ಕಂಪಲಿರಾಯ ಬುದ್ಧಿಮಾಂದ್ಯ ವಿಶೇಷ ಮಕ್ಕಳಿಗೆ ಹಣ್ಣು ಹಂಪಲು ವಿತರಿಸುವ ಮೂಲಕ ಜಯಂತಿ ಅರ್ಥಪೂರ್ಣವಾಗಿ ಆಚರಿಸಲಾಯಿತು ಎಂದರು.

ನಂತರ ಸಂಘಟನಾ ಸಂಚಾಲಕ ಹೆಚ್. ಮರಿಯಪ್ಪ ಸಣಾಪುರ ಮಾತನಾಡಿ, ರಾಜ್ಯದಲ್ಲಿ ನಡೆಯುತ್ತಿರುವ ಅನ್ಯಾಯದ ವಿರುದ್ಧ ಸಂಘಟನೆಯ ಮೂಲಕ ಧ್ವನಿ ಎತ್ತುವ ಮೂಲಕ ಜನಸಾಮಾನ್ಯ–ರಿಗೆ ನ್ಯಾಯಕೊಡಿಸುವ ನಿಟ್ಟಿನಲ್ಲಿ ಸಂಘಟನೆಯನ್ನು ಹುಟ್ಟು ಹಾಕಿದ್ದಾರೆ. ಈ ಸಂಘಟನೆ ರಾಜ್ಯದ್ಯಂತ ದೊಡ್ಡಮಟ್ಟದಲ್ಲಿ ಬೆಳೆಯುವ ಜೊತೆಗೆ ಜನರ ಸೇವೆಯನ್ನು ನಿರಂತರ ಮಾಡಿಕೊಂಡು ಬರುತ್ತಿದೆ. ಪ್ರೊಫೆಸರ್ ಕೃಷ್ಣಪ್ಪ ಅವರ ಆದರ್ಶ ವಿಚಾರಗಳನ್ನು ಮೈಗೂಡಿಸಿಕೊಂಡು ನಾಡಿನುದ್ದಕ್ಕೂ ಜನಪರ ಸೇವೆಗಳನ್ನು ಮಾಡಲಾಗುವುದು ಎಂದರು. ಈ ಸಂದರ್ಭದಲ್ಲಿ ತಾಲೂಕ ಸಮಿತಿ ಸಲಹೆಗಾರ ಲಕ್ಷ್ಮೀಪತಿ, ಗ್ರಾಮ ಸಂಚಾಲಕರಾದ ಪರಶುರಾಮ,

ಉಮೇಶ್, ರುದ್ರ, ಮುಖಂಡರಾದ ಹುಲುಗಪ್ಪ, ಚನ್ನಬಸವ, ರಾಮಲಿ, ಈರಣ್ಣ, ಯಲ್ಲಪ್ಪ, ಶಾಲೆಯ ಮುಖ್ಯಗುರು ಬಸವರಾಜ, ಶಿಕ್ಷಕಿಯರಾದ ಮೆಹಬೂಬ್ ಬೀ, ಕೆ.ರಾಧಾ, ಅನಿತಾ, ವಿಜಯಲಕ್ಷ್ಮಿ ಸೇರಿದಂತೆ ಮಕ್ಕಳು ಪಾಲ್ಗೊಂಡಿದ್ದರು. ಇಲ್ಲಿನ ಅಂಬೇಡ್ಕರ್ ವೃತ್ತದಲ್ಲಿ ಪ್ರೋ.ಕೃಷ್ಣಪ್ಪ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಪುಷ್ಪ ನಮನದೊಂದಿಗೆ ಜಯಂತಿ ಆಚರಿಸಿದರು.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101